# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 21 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 02–08–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00

Volume - 02 Issue - 21 | Title- Code: KARKAN 28269 | Chitradurga | Date: 02-08-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಸ್ವಾತಂತ್ರ್ಯ ದಿನಾಚರಣೆಗೆ ಸಕಲ ಸಿದ್ಧತೆ ಕೈಗೊಳ್ಳಿ: ಜಿಲ್ಲಾಧಿಕಾರಿ 2

ಹೊಳಲ್ಕೆರೆ: ವಸತಿ ಶಾಲೆಗೆ ಹಾಸ್ಟೆಲ್ ಕೊರತೆ 3

ಶಾಲಾ ಕಟ್ಟಡ ದುರಸ್ತಿ ತಿಂಗಳಲ್ಲಿ ಪೂರ್ಣಗೊಳಿಸಲು ಸೂಚನೆ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ



» ಚಿತ್ರದುರ್ಗ

ಹಿರಿಯೂರು ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ನಿವೃತ್ತಿ/ಇತರೆ ಕಾರಣಗಳಿಂದ ತೆರವಾಗಿರುವ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 30 ರಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಿದ್ದು, ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಹಿರಿಯೂರು ತಾಲ್ಲೂಕಿನಾದ್ಯಂತ 4 ಅಂಗನವಾಡಿ ಕಾರ್ಯಕರ್ತೆ ಹುದ್ದೆ, 1 ಮಿನಿ ಕಾರ್ಯಕರ್ತೆ ಹುದ್ದೆ ಮತ್ತು 35 ಅಂಗನವಾಡಿ ಸಹಾಯಕಿರ ಹುದ್ದೆಗಳಿಗೆ ಅರ್ಹ ಸ್ಥಳೀಯ ಮಹಿಳಾ ಅಭ್ಯರ್ಥಿಗಳು ಇಲಾಖೆಯ ವೆಬ್ಸೈಟ್ www.anganvwadirecuruit.kar.nic.in ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಬಹುದು. ಅಂಗನವಾಡಿ ಕಾರ್ಯಕರ್ತೆ ಖಾಲಿ ಹುದ್ದೆ ಹಾಗೂ ಮೀಸಲಾತಿ ವಿವರ: ಕೆ.ಆರ್. ಹಳ್ಳಿ ಗ್ರಾ.ಪಂ.ನ ಬೋರನಕುಂಟೆ, ಬ್ಯಾಡರಹಳ್ಳಿ ಗ್ರಾ.ಪಂ.ನ ಐನಹಳ್ಳಿ, ಕಣಜನಹಳ್ಳಿ ಗ್ರಾ.ಪಂ.ನ ಕಣಜನಹಳ್ಳಿ–1, ಈಶ್ವರಗೆರೆ ಗ್ರಾ.ಪಂ.ನ ವಿ.ಕೆ. ಗುಡ್ಡ–3 ಅಂಗನವಾಡಿ ಕಾರ್ಯಕರ್ತೆ ಹುದ್ದೆಗಳು ಹಾಗೂ ಧರ್ಮಪುರ ಕೆರೆಮುಂದಲಹಟ್ಟಿ ಅಂಗನವಾಡಿ ಕೇಂದ್ರ ಮಿನಿ ಕಾರ್ಯಕರ್ತೆ ಹುದ್ದೆ ಇತರೆ ವರ್ಗಕ್ಕೆ ಮೀಸಲಾಗಿದೆ.

**ಅಂಗನವಾಡಿ ಸಹಾಯಕಿಯರ ಹುದ್ದೆಗಳ ವಿವರ:** ದಿಂಡಾವರ ಗ್ರಾ.ಪಂ.ನ ದಿಂಡಾವರ ಹೊಸೂರು ಹಾಗೂ ಮಾವಿನಮಡು, ಹರ್ತಿಕೋಟೆ ಗ್ರಾ.ಪಂ.ನ ಹರ್ತಿಕೋಟೆ–3, ಮರಡಿಹಳ್ಳಿ ಗ್ರಾ.ಪಂ.ನ ಮರಡಿಹಳ್ಳಿ ಎ.ಕೆ.ಕಾಲೋನಿ, ಐಮಂಗಲ ಗ್ರಾ.ಪಂ.ನ ಐಮಂಗಲ ಎ.ಕೆ.ಕಾಲೋನಿ, ಬುರುನರೊಪ್ಪ ಗ್ರಾ.ಪಂ.ನ ಪಾಲವ್ವನಹಳ್ಳಿ–3, ಸೂರಗೊಂಡನಹಳ್ಳಿ ಗ್ರಾ.ಪಂ.ನ ಗುಡಿಹಳ್ಳಿ, ಬಬ್ಬೂರು ಗ್ರಾ.ಪಂ.ನ ಬಬ್ಬೂರು ಫಾರಂ–2, ಉಡವಳ್ಳಿ ಗ್ರಾ.ಪಂ.ನ ಚಳ್ಳಮಡು ಭೂತನಹಟ್ಟಿ, ಕಣನಜಹಳ್ಳಿ ಬೇತೂರು ಮಾರಮ್ಮನಹಳ್ಳಿ ಹಾಗೂ ಹಿರಿಯೂರು ನಗರದ ವಾರ್ಡ ಸಂಖ್ಯೆ 30 ರ ಹರಿಶ್ಚಂದ್ರ ಘಾಟ್–1 ಅಂಗನವಾಡಿ ಸಹಾಯಕಿಯರ ಹುದ್ದೆಗಳು ಪರಿಶಿಷ್ಟ ಜಾತಿ ಮೀಸಲಾಗಿವೆ. ಮಸ್ಕಲ್ ಗ್ರಾ.ಪಂ.ನ ಕೆ.ಆರ್.ಪುರ ಅಂಗನವಾಡಿ ಸಹಾಯಕಿ ಹುದ್ದೆ ಪರಿಶಿಷ್ಟ ಪಂಗಡಕ್ಕೆ ಮೀಸಲಾಗಿದೆ. ಉಳಿದಂತೆ ದಿಂಡಾವರ ಗ್ರಾ.ಪಂ.ನ ನಡುವಲಹಟ್ಟಿ, ಕೆ.ಆರ್.ಹಳ್ಳಿ ಗ್ರಾ.ಪಂ.ನ ಕೆ.ಆರ್.ಹಳ್ಳಿ–1 ಹಾಗೂ ಗೊರ್ಲಡಕು, ಖಂಡೇನಹಳ್ಳಿ ಗ್ರಾ.ಪಂ.ನ ಖಂಡೇನಹಳ್ಳಿ–3, ಇಕ್ಕನೂರು ಗ್ರಾ.ಪಂ.ನ ಎಣ್ಣೆಗೆರೆ, ರಂಗೇನಹಳ್ಳಿ ಗ್ರಾ.ಪಂ.ನ ರಂಗೇನಹಳ್ಳಿ–1, ಬ್ಯಾಡರಹಳ್ಳಿ ಗ್ರಾ.ಪಂ.ನ ಅಂಬಲಗೆರೆ–1, ಐಮಂಗಲ ಗ್ರಾ.ಪಂ.ನ ಕರೆಚಿಕ್ಕಯ್ಯನರೊಪ್ಪ (ಕೆ.ಸಿ.ರೊಪ್ಪ) ಹಾಗೂ ದಾಸಣ್ಣ ಮಾಳಿಗೆ, ಎಂ.ಡಿ.ಕೋಟೆ ಗ್ರಾ.ಪಂ.ನ ಸೋಂಡೇಕೆರೆ–3, ಮರಡಿಹಳ್ಳಿ ಗ್ರಾ.ಪಂ.ನ ಬಂಡ್ಲಾರಹಟ್ಟಿ, ಬುರುಜಿನರೊಪ್ಪ ಗ್ರಾ.ಪಂ.ನ ಪಾಲ್ವನಹಳ್ಳಿ–2, ಬ್ಯಾಡರಹಳ್ಳಿ ಗ್ರಾ.ಪಂ.ನ ಬ್ಯಾಡರಹಳ್ಳಿ–1, ಉಡವಳ್ಳಿ ಗ್ರಾ.ಪಂ.ನ ಸೀಗೇಹಟ್ಟಿ ಹಾಗೂ ಸೋಮೇರಹಳ್ಳಿ ಗೊಲ್ಲರಹಟ್ಟಿ, ಕೂನಿಕೆರೆ ಗ್ರಾ.ಪಂ.ನ ಕೆರೆಕೊಡಿ ಹಟ್ಟಿ, ಹರಿಯಬ್ಬೆ ಗ್ರಾ.ಪಂ.ನ ಮುಂಗಸವಳ್ಳಿ ಹಾಗೂ ಹರಿಯಬ್ಬೆ ಕೃಷ್ಣಗಿರಿ, ಧರ್ಮಪುರ ಗ್ರಾ.ಪಂ.ನ ಶ್ರವಣಗೆರೆ–2, ಹಿರಿಯೂರು ನಗರದ ವಾರ್ಡ ಸಂಖ್ಯೆ 20 ರ ಹುಳಿಯಾರು ರಸ್ತೆ–3, ವಾರ್ಡ ಸಂಖ್ಯೆ 15 ರ ಗೋಪಾಲಪುರ–1, ವಾರ್ಡ ಸಂಖ್ಯೆ 18 ರ ಎ.ಕೆ. ಕಾಲೋನಿ–3, ವಾರ್ಡ ಸಂಖ್ಯೆ 8 ರ ಮಿರ್ಜಾ ಬಡವಾಣೆ ಅಂನವಾಡಿ ಸಹಾಯಕಿಯರ ಹುದ್ದೆಗಳು ಇತರೆ ವರ್ಗಕ್ಕೆ ಮೀಸಲಾಗಿವೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 08193–263512 ಸಂಪರ್ಕಿಸಬಹುದು.

### ವ್ಯಸನ ಮುಕ್ತ ದಿನಾಚರಣೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಕರೆ

# ಸಂಯಮ, ಅರಿವು ಬೆಳಸಿಕೊಳ್ಳುವ ಮೂಲಕ ದುಶ್ಚಟಗಳಿಂದ ದೂರವಿರಿ






» ಚಿತ್ರದುರ್ಗ

ಹಿಂದಿನ ದಿನಮಾನಗಳಲ್ಲಿ ದುಶ್ಚಟ ಎಂದರೆ ಕುಡಿತ, ಬೀಡಿ, ಸಿಗರೇಟ್, ಗುಟುಕಾ ಸೇವನೆಗೆ ಸೀಮಿತವಾಗಿತ್ತು. ಪ್ರಸ್ತುತ ದುಶ್ಚಟಗಳ ವ್ಯಾಪ್ತಿ ಎಲ್ಲೆ ಮೀರಿ ಹೋಗುತ್ತಿದೆ. ವಯಸ್ಸಿನ ಭೇದ ಭಾವಗಳಿಲ್ಲದೆ ಪ್ರತಿಯೊಬ್ಬರು ಸಂಯಮ ಹಾಗೂ ಅರಿವು ಬೆಳಸಿಕೊಳ್ಳುವ ಮೂಲಕ ದುಶ್ಚಟಗಳಿಂದ ದೂರವಿರುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಕರೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಮದ್ಯಪಾನ ಸಂಯಮ ಮಂಡಳಿ, ಶಿಕ್ಷಣ ಇಲಾಖೆ, ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಗುರುವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾದವ್ಯಸನಮುಕ್ತದಿನಾಚರಣೆ ಕಾರ್ಯಕ್ರಮದಲ್ಲಿ ಡಾ.ಮಹಾಂತ ಶಿವಯೋಗಿಗಳ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಯುವಜನತೆ ಮಾದಕ ವ್ಯಸನಗಳ ಕಡೆ ಆಕರ್ಷಣೆಯಾಗುತ್ತಿರುವುದು ವಿಷಾದನೀಯ ಸಂಗತಿಯಾಗಿದೆ. ವ್ಯಸನಗಳು ಮನುಷ್ಯನ ಜೀವನ ಹಾಳು ಮಾಡುವುದರ ಜೊತೆಗೆ, ಕುಟುಂಬ ಹಾಗೂ ಸಮಾಜದ ವ್ಯವಸ್ಥೆಯನ್ನು ಸಹ ಹಾಳುಗೆಡವುತ್ತವೆ. ಡಾ.ಮಹಾಂತ ಶಿವಯೋಗಿ ಸ್ವಾಮೀಜಿಗಳು ಮಹಾಂತ ಜೋಳಿಗೆ ಎಂಬ ಕಲ್ಪನೆ ರೂಪಿಸಿ, ದೇಶ ವಿದೇಶಗಳಲ್ಲಿ ಸಂಚರಿಸಿ, ಜನರ ದುಶ್ಚಟಗಳನ್ನು ತಮ್ಮ ಜೋಳಿಗೆ ತುಂಬಿಸಿಕೊಂಡು ವ್ಯಸನಮುಕ್ತರನ್ನಾಗಿಸಿ ಜನರ ಜೀವನ ಹಸನು ಮಾಡಿದರು. ಪ್ರತಿ ಮಕ್ಕಳಿಗೂ ಮನೆಯೇ ಮೊದಲ ಪಾಠಶಾಲೆ. ಮನೆಯಲ್ಲಿ ಹಿರಿಯರನ್ನು ನೋಡಿ ಮಕ್ಕಳು ಕಲಿಯುತ್ತಾರೆ ಎಂದರು.

ಹಿರಿಯರಲ್ಲಿ ದುಶ್ಚಟಗಳಿದ್ದರೆ, ಮಕ್ಕಳು ದುಪಟ್ಟು ದುಶ್ಚಟ ಮಾಡುತ್ತಾರೆ. ಶಾಲೆಯಲ್ಲಿ ಪಾಠ ಹೇಳುವ ಗುರುಗಳೇ ದುಶ್ಚಟಗಳ ದಾಸರಾದರೆ, ಮಕ್ಕಳಿಗೆ ದುಶ್ಚಟಗಳಿಂದ ದೂರ ಇರಿ ಎಂದು ಹೇಳುವ ನೈತಿಕತೆ ಕಳೆದುಕೊಳ್ಳಬೇಕಾಗುತ್ತದೆ. ನಮ್ಮ ಮನಪರಿವರ್ತನೆ ಮಾಡಿಕೊಳ್ಳುವ ಮೂಲಕ ಜೀವನದಲ್ಲಿ ಬದಲಾವಣೆ ತಂದುಕೊಳ್ಳಬೇಕು ಎಂದು ಹೇಳಿದರು.

ಗ್ರಾಮೀಣ ಪ್ರದೇಶದಲ್ಲಿ ಕೆಲ ಕೂಲಿ ಕಾರ್ಮಿಕರು ಕುಡಿತ, ಬೀಡಿ, ಗುಟುಕಾಗಳ ದಾಸರಾಗಿರುವುದು ವಿಪರ್ಯಾಸದ ಸಂಗತಿಯಾಗಿದೆ. ಇದರಿಂದ ಅವರ ಆರೋಗ್ಯ ಹಾಳಾಗುವುದರ ಜೊತೆಗೆ ದೇಹದಲ್ಲಿ ಕೆಲಸ ಮಾಡುವ ಚೈತನ್ಯ ಹಾಗೂ ಶಕ್ತಿ ಸಹ ಕಡಿಮೆಯಾಗುತ್ತಿದೆ. ನಗರ ಪ್ರದೇಶದಲ್ಲಿನ ಕಾಲೇಜುಗಳಲ್ಲಿ ಓದುತ್ತಿರುವ ಯುವಜನತೆ ಡ್ರಗ್ಗಳ ಸೇವನೆಯವ್ಯಾಮೋಹಕ್ಕೆಒಳಗಾಗುತ್ತಿದ್ದಾರೆ. ಈ ಚಟಗಳಿಗೆ ಒಮ್ಮೆ ಅಂಟಿಕೊಂಡರೆ ಇವುಗಳಿಂದ ಹೊರ ಬರುವುದು ಕಷ್ಟದ ಕೆಲಸ. ಇನ್ನು ಧೂಮಪಾನ ಮಾಡುವವರ ಸುತ್ತಮುತ್ತ ಇರುವವರು ಸಹ ಕ್ಯಾನ್ಸರ್‌ಗೆ ತುತ್ತಾಗುತ್ತಿದ್ದಾರೆ. ಇದರಿಂದ ಹೊರಬಂದು ಮನೆ ಹಾಗೂ ದೇಶವನ್ನು ವ್ಯಸನ ಮುಕ್ತವಾಗಿಸಲು ಪ್ರತಿಯೊಬ್ಬರು ಪಣತೊಡುವಂತೆ ಕರೆ ನೀಡಿದರು.

ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಪ್ರಾಸ್ತಾವಿಕವಾಗಿ ಮಾತನಾಡಿ, ಡಾ.ಮಹಾಂತ ಶಿವಯೋಗಿ ಅವರ ಜನ್ಮದಿನವಾದ ಆಗಸ್ಟ್ 01 ದಿನವನ್ನು ರಾಜ್ಯ ಸರ್ಕಾರ ವ್ಯಸನ ಮುಕ್ತ ದಿನವನ್ನಾಗಿ ಘೋಷಿಸಿದೆ.

ಡಾ. ಮಹಾಂತ ಶಿವಯೋಗಿ ಸ್ವಾಮಿಗಳ ಪ್ರೇರಣೆಯಿಂದ ರಾಜ್ಯದ ಲಕ್ಷಾಂತರ ಜನ ವ್ಯಸನಗಳಿಂದ ಮುಕ್ತರಾಗಿ ನೆಮ್ಮದಿಯ ಜೀವನ ಸಾಗಿಸುತ್ತಿದ್ದಾರೆ. ಸುಧೀರ್ಘ 42 ವರ್ಷಗಳ ಕಾಲ ನಾಡಿನಾದ್ಯಂತ ಸಂಚರಿಸಿ ಮಹಾಂತ ಜೋಳಿಗೆ ಹಿಡಿದು ಜನರಿಂದ ದುಶ್ಚಟಗಳ ಭಿಕ್ಷೆ ಪಡೆದು ಸ್ವಾಮೀಜಿಗಳು ಸಮಾಜದಲ್ಲಿ ಪರಿವರ್ತನೆ ತರುವಲ್ಲಿ ಮಹತ್ವದ ಪಾತ್ರ ವಹಿಸಿದರು ಎಂದರು.

ಅಬಕಾರಿ ನಿರೀಕ್ಷಕಿ ವನಿತಾ ಮಾತನಾಡಿ, ಯುವ ಜನತೆ ವ್ಯಸನಗಳಿಂದ ದೂರವಾಗಿ, ಕುಟುಂಬ ಹಾಗೂ ಸಮಾಜದಲ್ಲಿ ಸುಸ್ಥಿರ ಅಭಿವೃದ್ಧಿ ಸಾಧಿಸಬೇಕು. ಮಾದಕ ವ್ಯಸನಗಳಾದಗಾಂಜಾ,ಹೆರಾಯಿನ್‌ಗಳಿಂದ ದೂರ ಇರಬೇಕು. ಇಂತಹ ಮಾದಕ ವಸ್ತುಗಳ ಮಾರಾಟದ ಬಗ್ಗೆ ತಿಳಿದು ಬಂದರೆ, ತಕ್ಷಣವೇ ಅಬಕಾರಿ ಇಲಾಖೆಗೆ ಮಾಹಿತಿ ನೀಡುವಂತೆ ತಿಳಿಸಿದರು.

ಅಬಕಾರಿಇಲಾಖೆಮುಖ್ಯಪೇದೆರಮೇಶ್ ನಾಯ್ಕ್ ಮಾತನಾಡಿ, ಧೂಮಪಾನ ಮಾಡುವವರಿಗಿಂತ ಅವರ ಪಕ್ಕದಲ್ಲಿದ್ದು, ಅದರ ಪರಿಣಾಮಕ್ಕೆ ತುತ್ತಾಗುತ್ತಿರುವವರ ಪ್ರಮಾಣ ಹೆಚ್ಚಾಗುತ್ತಿದೆ. ಧೂಮಪಾನ ನೇರವಾಗಿ ಕ್ಯಾನ್ಸರ್ ಗೆ ಕಾರಣವಾಗಿದೆ. ವಿಶ್ವದಲ್ಲಿ 120 ಕೋಟಿಗೂ ಅಧಿಕ ಜನ ಧೂಮಪಾನದಿಂದ ಭಾದಿತರಾಗಿದ್ದಾರೆ. ಶ್ವಾಸಕೋಶ, ಗಂಟಲು ಕ್ಯಾನ್ಸರ್ ಸೇರಿದಂತೆ, ಧೂಮಪಾನ ಮಾಡುವ ಗರ್ಭಿಣಿಯರಲ್ಲಿ ಹುಟ್ಟುವ ಮಗು ಸಹ ದುಷ್ಪರಿಣಾಮಕ್ಕೆ ತುತ್ತಾಗುತ್ತವೆ. ಹೀಗಾಗಿ ಪ್ರತಿಯೊಬ್ಬರು ಧೂಮಪಾನದಿಂದ ದೂರ ಇರಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್. ಕೆ.ಮಲ್ಲಿಕಾರ್ಜುನ್, ಡಾ.ಮಹಾಂತ ಶಿವಯೋಗಿಗಳ ಕುರಿತು ಉಪನ್ಯಾಸ ನೀಡಿದರು. ರಂಗಕರ್ಮಿ ಕೆ.ಪಿ.ಎಂ. ಗಣೇಶಯ್ಯ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ವಾರ್ತಾ, ಅಬಕಾರಿ, ಶಿಕ್ಷಣ, ಸಮಾಜಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿ ಹಾಗೂ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ವ್ಯಸನ ಮುಕ್ತ ಸಮಾಜಕ್ಕಾಗಿ ಜಾಥಾ

ವ್ಯಸನಮುಕ್ತ ದಿನಾಚರಣೆ ಕಾರ್ಯಕ್ರಮದ ಅಂಗವಾಗಿ ಆಯೋಜಿಸಲಾದ ಜಾಗೃತಿ ಜಾಥಕ್ಕೆ ನಗರದ ಒನಕೆ ಓಬವ್ವ ವೃತ್ತದಲ್ಲಿ ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ್ ಹಾಗೂ ಉಪವಿಭಾಗಧಿಕಾರಿ ಎಂ.ಕಾರ್ತಿಕ್ ಹಸಿರು ನಿಶಾನೆ ತೋರುವುದರ ಮೂಲಕ ಚಾಲನೆ ನೀಡಿದರು. ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ವ್ಯಸನ ಮುಕ್ತ ಸಮಾಜ ನಿರ್ಮಾಣದ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ಮದ್ಯ ಮತ್ತು ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಘೋಷಣೆ ಕೂಗುವುದರ ಜೊತೆಗೆ ಘೋಷವಾಕ್ಯಗಳ ಫಲಕಗಳನ್ನು ಹಿಡಿದು ವಿದ್ಯಾರ್ಥಿಗಳು ಹಾಗೂ ಅಬಕಾರಿ ಇಲಾಖೆ ಅಧಿಕಾರಿಗಳು ವ್ಯಸನ ಮುಕ್ತ ಸಮಾಜದ ನಿರ್ಮಾಣಕ್ಕಾಗಿ ಜಾಗೃತಿ ಜಾಥ ನಡೆಸಿದರು. ಒನಕೆ ಓಬವ್ವ ವೃತ್ತದಿಂದ ಆರಂಭವಾದ ಜಾಥಾ, ಮದಕರಿ ನಾಯಕ ವೃತ್ತ, ಅಂಬೇಡ್ಕರ್ ವೃತ್ತ, ಮಹಾವೀರ ವೃತ್ತ, ವಾಸವಿ ವೃತ್ತ ಮೂಲಕ ಪುನಃ ಒನಕೆ ಓಬವ್ವ ವೃತ್ತ ತಲುಪುವ ಮೂಲಕ ಸಂಪನ್ನಗೊಂಡಿತು ಉಪವಿಭಾಗಧಿಕಾರಿ ಎಂ.ಕಾರ್ತಿಕ್, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಪಿಆರ್‌ಇಡಿ ಇಲಾಖೆ ಎಇಇ ಹನುಮಂತಪ್ಪ, ರಂಗಕರ್ಮಿ ಕೆ.ಪಿ.ಎಂ.ಗಣೇಶಯ್ಯ ಸೇರಿದಂತೆ ಇತರೆ ಅಧಿಕಾರಿಗಳು ಜಾಥಾದಲ್ಲಿ ಪಾಲ್ಗೊಂಡಿದ್ದರು.

## ಪ್ರಮುಖ ಸುದ್ದಿ

### ಸುಪ್ರೀಂ ಕೋರ್ಟ್ ತೀರ್ಪು ಐತಿಹಾಸಿಕ

# ಒಳಮೀಸಲಾತಿ ಹೋರಾಟಕ್ಕೆ ದಿಗ್ವಿಜಯ

### ಐಸಿಯುನಲ್ಲಿದ್ದ ಸಮುದಾಯಕ್ಕೆ ಬದುಕುವ ಭರವಸೆ – ಕರ್ನಾಟಕ, ಆಂಧ್ರದಲ್ಲಿ ಜಾರಿಗೆ ತುರ್ತು ಕ್ರಮ ಅಗತ್ಯ: ಮಾಜಿ ಸಚಿವ ಎಚ್.ಆಂಜನೇಯ ಹೇಳಿಕೆ






» ಚಿತ್ರದುರ್ಗ

ಪರಿಶಿಷ್ಟ ಜಾತಿಯಲ್ಲಿ ಒಳಮೀಸಲು ಸೌಲಭ್ಯ ಕಲ್ಪಿಸಬೇಕೆಂಬ ಮೂರು ದಶಕದ ಹೋರಾಟಕ್ಕೆ ಸುಪ್ರೀಂ ಕೋರ್ಟ್ ಗುರುವಾರ ಪ್ರಕಟಿಸಿದ ತೀರ್ಪು ಐತಿಹಾಸಿಕ ಗೆಲುವು ತಂದುಕೊಟ್ಟಿದೆ ಎಂದು ಮಾಜಿ ಸಚಿವ ಎಚ್.ಆಂಜನೇಯ ಹೇಳಿದ್ದಾರೆ.

ಗುರುವಾರ ಪತ್ರಿಕಾ ಹೇಳಿಕೆ ನೀಡಿರುವ ಅವರು, ಕರ್ನಾಟಕ ಸರ್ಕಾರ ಒಳಮೀಸಲಾತಿ ಸಂಬಂಧ ಜಾರಿಗೆ ಮುಂದಾಗಿದ್ದ ನಡೆಗೆ ಸುಪ್ರೀಂಕೋರ್ಟ್ ಅಸ್ತು ಎನ್ನುವ ಮೂಲಕ ಮೀಸಲಾತಿ ವರ್ಗೀಕರಣ ಸಂವಿಧಾನಾತ್ಮಕ ನಿರ್ಧಾರ ಎಂಬ ಸಂದೇಶ ನೀಡಿದೆ.

ಸತತ 30 ವರ್ಷಗಳಿಂದ ದಲಿತಪರ ಸಂಘಟನೆಗಳು,ಜನಪ್ರತಿನಿಧಿಗಳು ನಿರಂತರ ಹೋರಾಟ ನಡೆಸಿಕೊಂಡು ಬಂದಿದ್ದರ ಫಲ ದೊರೆತಿದೆ. ಕತ್ತಲ ಬದುಕಿನಲ್ಲಿದ್ದ ಎಸ್ಸಿಯಲ್ಲಿ ಬಹಳಷ್ಟು ಸಮುದಾಯಗಳಿಗೆ ಕೋರ್ಟ್ ತೀರ್ಪು ಐಸಿಯು ನಲ್ಲಿದ್ದವರಿಗೆ ಬದುಕುವ ಭರವಸೆಯಂತೆ ಆಶಾಭಾವನೆ ಮೂಡಿಸಿದೆ ಎಂದು ತಿಳಿಸಿದ್ದಾರೆ. ಒಳಮೀಸಲಾತಿ ಜಾರಿ ಸಂಬಂಧ ಹೋರಾಟ ತೀವ್ರಗೊಂಡ ಸಂದರ್ಭ ಅಂದಿನ ಕಾಂಗ್ರೆಸ್ ಸರ್ಕಾರ ನ್ಯಾ.ಸದಾಶಿವ ನೇತೃತ್ವದಲ್ಲಿ ಅಯೋಗ ರಚಿಸುವ ಮೂಲಕ ಹೋರಾಟಕ್ಕೆ ಸ್ಪಂದಿಸಿತ್ತು. ಸದಾಶಿವ ಆಯೋಗ ವರದಿ ನೀಡಿದ್ದರೂ ಅದನ್ನು ಕೇಂದ್ರಕ್ಕೆ ಶಿಫಾರಸ್ಸು ಮಾಡುವಲ್ಲಿ ಹಲವು ಅಡ್ಡಿ ಆತಂಕಗಳು ಎದುರಾಗಿದ್ದವು. ಆದರೆ, ಪ್ರಸ್ತುತ ಕೋರ್ಟ್ ತೀರ್ಪು ಸದಾಶಿವ ಆಯೋಗದ ವರದಿ ಜಾರಿಗೆ ಆನೆಬಲ ನೀಡಿದೆ. ಆದ್ದರಿಂದ ಹೋರಾಟ ಹುಟ್ಟಿದ ಕರ್ನಾಟಕ ಮತ್ತು ಆಂಧ್ರಪ್ರದೇಶ, ತೆಲಂಗಾಣದಲ್ಲಿ ಕೂಡಲೇ ಒಳಮೀಸಲು ಸೌಲಭ್ಯ ಕಲ್ಪಿಸಲು ಸರ್ಕಾರಗಳು ಮುಂದಾಗಬೇಕು. ಈಗಾಗಲೇ ಉದ್ಯೋಗಕ್ಕೆ ಅರ್ಜಿ ಆಹ್ವಾನಿಸುವುದನ್ನು ರದ್ದುಗೊಳಿಸಿ, ಮೀಸಲಾತಿ ವರ್ಗೀಕರಣಗೊಂಡ ಬಳಿಕ ಅರ್ಜಿ ಆಹ್ವಾನಿಸಬೇಕು ಎಂದು ಆಂಜನೇಯ ಒತ್ತಾಯಿಸಿದ್ದಾರೆ.

ಆರಂಭದಿಂದಲೂ ಒಳಮೀಸಲು ಪರವಿದ್ದ ಕಾಂಗ್ರೆಸ್ ಈ ಬಾರಿಯ ವಿಧಾನಸಭಾ ಚುನಾವಣಾ ಪ್ರಣಾಳಿಕೆಯಲ್ಲಿ ಲಿಖಿತವಾಗಿ ಘೋಷಿಸಿತ್ತು. ಜೊತೆಗೆ ಒಳಮೀಸಲು ಸಂಬಂಧ ಸಿದ್ಧರಾಮಯ್ಯ ಸರ್ಕಾರ ಆರು ತಿಂಗಳ ಹಿಂದೆ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಿದ್ದು, ಈಗಿನ ಕೋರ್ಟ್ ತೀರ್ಪು ದಲಿತಪರ ಹೋರಾಟಕ್ಕೆ ಹಾಗೂ ಕಾಂಗ್ರೆಸ್ ಪಕ್ಷದ ನಡೆಗೆ ಜಯ ಸಿಕ್ಕಂತಾಗಿದೆ ಎಂದು ಆಂಜನೇಯ ಸಂತಸ ವ್ಯಕ್ತಪಡಿಸಿದ್ದಾರೆ.

ಒಳಮೀಸಲಾತಿ ಕೇವಲ ಮಾದಿಗ, ಛಲವಾದಿ ಸಮುದಾಯಗಳಿಗೆ ಅನುಕೂಲ ಆಗಲಿದೆ ಎಂಬ ತಪ್ಪುಗ್ರಹಿಕೆಗೆ ಕೋರ್ಟ್ ತೀರ್ಪು ಉತ್ತರವಾಗಿದೆ. ಪರಿಶಿಷ್ಟ ಜಾತಿಯಲ್ಲಿರುವ ಯಾವುದೇ ಜಾತಿಯನ್ನು ಕೈಬಿಡುವ ಪ್ರಶ್ನೆಯೇ ಇಲ್ಲ. ಜೊತೆಗೆ ಯಾವುದೇ ಸಮುದಾಯಕ್ಕೆ ಅನ್ಯಾಯವಾಗುವುದಿಲ್ಲ. ಆದ್ದರಿಂದ ಪರಿಶಿಷ್ಟ ಗುಂಪಿನಲ್ಲಿರುವ ಯಾವುದೇ ಜಾತಿ ಜನ ಆತಂಕ ಪಡಬೇಕಾಗಿಲ್ಲ. ನಾವೆಲ್ಲರೂ ಒಂದೇ ತಂದೆ–ತಾಯಿ ಮಕ್ಕಳಾಗಿದ್ದು, ಜನಸಂಖ್ಯೆಗೆ ಅನುಗುಣವಾಗಿ ತಮ್ಮ ತಮ್ಮ ಪಾಲಿನ ಹಕ್ಕು ಪಡೆದುಕೊಳ್ಳುವುದೇ ಮೀಸಲಾತಿ ವರ್ಗೀಕರಣದ ಮೂಲ ಉದ್ದೇಶ. ಜೊತೆಗೆ ಕೋರ್ಟ್ ಕೂಡ ಸಮ್ಮತಿ ನೀಡಿದೆ ಎಂದಿದ್ದಾರೆ.

ಕೇವಲ ಕೋರ್ಟ್ ತೀರ್ಪು ಕರ್ನಾಟಕ ರಾಜ್ಯಕ್ಕಷ್ಟೇ ಸೀಮಿತಗೊಳಿಸದೆ, ಕೇಂದ್ರದ ಲ್ಲಿರುವ ಎನ್.ಡಿ.ಎ ಸರ್ಕಾರ ರಾಷ್ಟ್ರವ್ಯಾಪಿ ಮೀಸಲಾತಿ ವರ್ಗೀಕರಣಕ್ಕೆ ಮುಂದಾಗಬೇಕು. ಈ ಸಂಬಂಧ ನಮ್ಮ ನಾಯಕರಾದ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಕೂಡ ಧ್ವನಿಯೆತ್ತಲಿದ್ದಾರೆ. ಮುಖ್ಯವಾಗಿ ತೆಲಂಗಾಣದಲ್ಲಿ ಚುನಾವಣೆ ಸಂದರ್ಭ ಮಾದಿಗ ಸಮಾವೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಕೊಟ್ಟ ಮಾತನ್ನು ಅನುಷ್ಠಾನಕ್ಕೆ ತರಬೇಕು ಎಂದು ಒತ್ತಾಯಿಸಿದ್ದಾರೆ. ಮೀಸಲಾತಿ ವರ್ಗೀಕರಣಕ್ಕೆ ಕೋರ್ಟ್ ಒಪ್ಪುವುದಿಲ್ಲ ಎಂಬ ಕೆಲ ಪಟ್ಟಭದ್ರಹಿತಾಸಕ್ತಿಗಳು ಪದೇ ಪದೇ ನೀಡುತ್ತಿದ್ದ ಹೇಳಿಕೆಗೆ ತಕ್ಕ ಉತ್ತರ ನೀಡಿದೆ. ಪರಿಶಿಷ್ಟ ಜಾತಿ ಗುಂಪಿನಲ್ಲಿ 100ಕ್ಕೂ ಹೆಚ್ಚು ಜಾತಿಗಳಿದ್ದರೂ ಸಹೋದರರ ರೀತಿ ಸೌಹಾರ್ದ ಜೀವನ ನಡೆಸುತ್ತಿರುವುದಕ್ಕೆ ಒಳಮೀಸಲಾತಿ ಜಾರಿ ಇನ್ನಷ್ಟು ಬಲ ತಂದುಕೊಡಲಿದೆ. ಪರಸ್ಪರ ಅಪನಂಬಿಕೆಗಳಿಗೆ ಕಡಿವಾಣ ಬೀಳಲಿದೆ.


ಪುಟ ↘ 2

## ಫಾಸ್ಟ್ ನ್ಯೂಸ್

### ಒಳಮೀಸಲಾತಿ ಹೋರಾಟಕ್ಕೆ ದಿಗ್ವಿಜಯ

» ಮೊದಲ ಪುಟದಿಂದ

ಜನಸಂಖ್ಯೆಗೆ ಅನುಗುಣವಾಗಿ ಅವರವರ ಮೀಸಲಾತಿಯನ್ನು ಸದ್ಬಳಕೆ ಮಾಡಿಕೊಳ್ಳುವ ಮೂಲಕ ಎಲ್ಲ ಸಮುದಾಯಗಳು ಸಮಗ್ರವಾಗಿ ಪ್ರಗತಿ ಸಾಧಿಸಲು ಸಹಕಾರಿ ಆಗಲಿದೆ. ಆದ್ದರಿಂದ ಈ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರ ಕೂಡಲೇ ಒಳಮೀಸಲಾತಿ ಜಾರಿಗೆ ಮುಂದಾಗುವ ಮೂಲಕ ಇಡೀ ರಾಷ್ಟ್ರಕ್ಕೆ ಮಾದರಿ ಜೊತೆಗೆ ಕ್ರಾಂತಿಕಾರಿ ಹೆಜ್ಜೆ ಇಡಬೇಕು ಎಂದು ಆಗ್ರಹಿಸಿದ್ದಾರೆ.

ಸದಾ ನೊಂದ ಜನರು, ಅದರಲ್ಲೂ ದಲಿತರ ಪರ ಹತ್ತಾರು ಯೋಜನೆ ಜಾರಿಗೊಳಿಸಿ, ದೇಶದಲ್ಲಿಯೇ ಎ[illegible]ಸಿಎಸ್ಪಿ–ಟಿಎಸ್ಪಿ ಕಾಯ್ದೆ ಜಾರಿಗೊಳಿಸಲು ನಾನು ಸಚಿವನಾಗಿದ್ದ ಸಂದರ್ಭ ನನ್ನ ಬೆನ್ನಿಗೆ ನಿಂತಿದ್ದ ಹಾಗೂ ದೇಶದಲ್ಲಿಯೇ ಅಹಿಂದ ನೇತಾರ ಎಂಬ ಹೆಗ್ಗಳಿಕೆ ಪಡೆದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಈ ನಿಟ್ಟಿನಲ್ಲಿ ದಿಟ್ಟ ನಿರ್ಧಾರ ಕೈಗೊಂಡು ಇಡೀ ದೇಶವೇ ಕರ್ನಾಟಕದ ನಡೆಯತ್ತ ನೋಡುವ ರೀತಿ ಮಾಡುತ್ತಾರೆ ಎಂದು ಆಂಜನೇಯ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

### 21ನೇ ವಾರ್ಷಿಕ ಸಾಮಾನ್ಯ ಸಭೆ

» ದಾವಣಗೆರೆ

ಜಿಲ್ಲಾ ಸಹಕಾರ ಒಕ್ಕೂಟದ ಸಾಮಾನ್ಯ ಸಭೆಯನ್ನು ಒಕ್ಕೂಟದ ಅಧ್ಯಕ್ಷರಾದ ಶ್ರೀ ಸಿರಿಗೆರೆ ರಾಜಣ್ಣರವರ ಅಧ್ಯಕ್ಷತೆಯಲ್ಲಿ ಆಗಸ್ಟ್ 12 ರಂದು ಮಧ್ಯಾಹ್ನ 12 ಗಂಟೆಗೆ ದಾವಣಗೆರೆ ನಗರದ ಶ್ರೀ ಷ॥ ಬ್ರ॥ ಡಾ॥ ಸದ್ಯೋಜಾತ ಶಿವಾಚಾರ್ಯ ಮಹಾಸ್ವಾಮೀಜಿ ಟ್ರಸ್ಟ್, ಶಿವಾಚಾರ್ಯ ನಿಕೇತನ ಹಿರೇಮಠ, ಎಂ.ಸಿ.ಸಿ 'ಬಿ' ಬ್ಲಾಕ್, ಶಾಮನೂರು ರಸ್ತೆ, ಇಲ್ಲಿ ಕರೆಯಲಾಗಿದೆ ಎಂದು ಒಕ್ಕೂಟದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಲಪ್ಪ ಕೋಡಿಹಳ್ಳಿ ತಿಳಿಸಿದ್ದಾರೆ.

### ಅವಧಿ ವಿಸ್ತರಣೆ

» ದಾವಣಗೆರೆ

ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ. ದಾವಣಗೆರೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಪ್ರಸಕ್ತ ಸಾಲಿನಲ್ಲಿ ಐಎಎಸ್, ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿ ನೀಡಲು ಅರ್ಜಿ ಸಲ್ಲಿಸುವ ಅವಧಿಯನ್ನು ಆಗಸ್ಟ್ 31 ರವರೆಗೆ ವಿಸ್ತರಿಸಲಾಗಿದೆ ಎಂದು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

### ಅಕ್ಷರ ದಾಸೋಹ ಅಧಿಕಾರಿ ತಿಪ್ಪೇಸ್ವಾಮಿ ವರ್ಗ



» ಚಳ್ಳಕೆರೆ

ಸರ್ಕಾರದ ಸೇವೆಯಲ್ಲಿ ಹಲವಾರು ಸಮಸ್ಯೆಗಳ ನಡುವೆಯೂ ಜನರ ಹಿತಕ್ಕಾಗಿ ಕಾರ್ಯನಿರ್ವಹಿಸಬೇಕಾಗುತ್ತದೆ. ಸಮಸ್ಯೆಗಳನ್ನು ಹೊತ್ತು ಬರುವ ಜನರಿಗೆ ಉತ್ತಮ ಮಾರ್ಗದರ್ಶನ ನೀಡಿ ಸಮಸ್ಯೆಗಳಿಗೆ ಪರಿಹಾರವನ್ನು ನೀಡಬೇಕು. ಕಳೆದ ಹಲವಾರು ವರ್ಷಗಳಿಂದ ಅಕ್ಷರ ದಾಸೋಹ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ ತಿಪ್ಪೇಸ್ವಾಮಿ ಶಾಲಾ ಮಕ್ಕಳಿಗೆ ಗುಣಮಟ್ಟದ ಊಟದ ಜೊತೆಗೆ ಸಮಸ್ಯೆಗಳನ್ನು ಸಹ ನಿವಾರಿಸುವಲ್ಲಿ ಯಶಸ್ವಿಯಾಗಿದ್ದರು. ಮುಂಬಡ್ತಿ ಪಡೆದು ವರ್ಗಾವಣೆಯಾಗಿದ್ದು, ಅವರ ಸೇವೆಯನ್ನು ನಾವೆಲ್ಲರೂ ನಿತ್ಯ ಸ್ಮರಿಸಬೇಕು ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ ತಿಳಿಸಿದರು. ಅವರು, ಗುರುವಾರ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಅಕ್ಷರ ದಾಸೋಹ ಅಧಿಕಾರಿ ತಿಪ್ಪೇಸ್ವಾಮಿ ತಾವರೆಕೆರೆಯ ಸರ್ಕಾರಿ ಪ್ರೌಢಶಾಲೆಗೆ ಮುಖ್ಯೋಪಾಧ್ಯಯರಾಗಿ ವರ್ಗಾವಣೆಗೊಂಡ ಹಿನ್ನೆಲೆಯಲ್ಲಿ ಶಿಕ್ಷಣ ಇಲಾಖೆಯಿಂದ ಸನ್ಮಾನಿಸಿ ಬೀಳ್ಕೊಡಲಾಯಿತು. ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮಾತನಾಡಿ, ಅಕ್ಷರ ದಾಸೋಹ ಇಲಾಖೆಯಲ್ಲಿ ಎಲ್ಲಾ ಸಮಸ್ಯೆಗಳನ್ನು ಮೆಟ್ಟಿನಿಂತು ಶಾಲಾ ಮಕ್ಕಳಿಗೆ ಗುಣಮಟ್ಟದ ಆಹಾರವನ್ನು ಪೂರೈಸುವ ಮಹತ್ತರ ಜವಾಬ್ದಾರಿಯನ್ನು ಅಧಿಕಾರಿ ತಿಪ್ಪೇಸ್ವಾಮಿ ಯಶಸ್ವಿಯಾಗಿನಿಬಾಯಿಸಿದ್ದಾರೆ. ತಾಲ್ಲೂಕಿನ ಯಾವುದೇ ಭಾಗದಲ್ಲೂ ಬಿಸಿಯೂಟ ಕೊರತೆ ಉಂಟಾಗದಂತೆ ಮುತುವರ್ಜಿ ವಹಿಸಿದ್ದರು, ಶಿಕ್ಷಣ ಇಲಾಖೆ ಪರವಾಗಿ ಅವರನ್ನು ಅಭಿನಂದಿಸಿ ಬೀಳ್ಕೊಡಲಾಗುತ್ತಿದೆ ಎಂದರು. ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ತಿಪ್ಪೇಸ್ವಾಮಿ, ಚಳ್ಳಕೆರೆ ತಾಲ್ಲೂಕು ವಿಸ್ತಾರದಲ್ಲಿ ದೊಡ್ಡ ತಾಲ್ಲೂಕಾಗಿದೆ, ಈ ಭಾಗದಲ್ಲಿ ಹೆಚ್ಚಿನ ಸಮಸ್ಯೆಗಳಿವೆ. ಆದರೆ, ನಮ್ಮ ಇಲಾಖೆಗೆ ಸಂಬಂಧಪಟ್ಟಂತೆ ಪ್ರಾರಂಭದ ಹಂತದಲ್ಲಿ ಎಲ್ಲಾ ಸಮಸ್ಯೆಗಳನ್ನು ನಿವಾರಣೆ ಮಾಡಲಾಗಿತ್ತು. ಹಿರಿಯ ಅಧಿಕಾರಿಗಳ ಮಾರ್ಗದರ್ಶನದಿಂದ ಉತ್ತಮ ಸೇವೆ ಸಲ್ಲಿಸಲು ಅವಕಾಶ ದೊರಕಿಯಿತು ಎಂದರು. ನೂತನ ಅಕ್ಷರ ದಾಸೋಹ ಅಧಿಕಾರಿಯಾಗಿ ಜಿ.ಟಿ.ಮಂಜುನಾಥ ಅಧಿಕಾರ ಸ್ವೀಕರಿಸಿದರು. ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಹಲಿಂಗಪ್ಪ, ಮಾಜಿ ಜಿಲ್ಲಾಧ್ಯಕ್ಷ ಆರ್.ಮಾರುತೇಶ್, ಈರಣ್ಣ ಮುಂತಾದವರು ಉಪಸ್ಥಿತರಿದ್ದರು.

---

#### ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

# ಸ್ವಾತಂತ್ರ್ಯ ದಿನಾಚರಣೆಗೆ ಸಕಲ ಸಿದ್ಧತೆ ಕೈಗೊಳ್ಳಿ

» ಚಿತ್ರದುರ್ಗ



ಜಿಲ್ಲಾ ಮಟ್ಟದ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮವನ್ನು ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ವಿಜೃಂಭಣೆಯಿಂದ ಆಚರಿಸಲು ಅಗತ್ಯವಿರುವ ಎಲ್ಲಾ ಸಿದ್ಧತೆಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಆಯೋಜಿಸಲಾದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮವು ಇದೇ ಆಗಸ್ಟ್ 15 ರಂದು ಬೆಳಿಗ್ಗೆ 09 ಕ್ಕೆ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ನೆರವೇರಲಿದ್ದು, ರಾಷ್ಟ್ರಧ್ವಜಾರೋಹಣವನ್ನು ಜಿಲ್ಲಾ ಉಸ್ತುವಾರಿ ಸಚಿವರು ನೆರವೇರಿಸಿ, ಸ್ವಾತಂತ್ರೋತ್ಸವದ ಸಂದೇಶ ನೀಡುವರು. ಸ್ವಾತಂತ್ರೋತ್ಸವ ಆಚರಣೆಗೆ ಸಂಬಂಧಿಸಿದಂತೆ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕಾರ್ಯೋನ್ಮುಖರಾಗಿ ತಮ್ಮ ಹಂತದಲ್ಲಿ ಉಪಸಮಿತಿಗಳ ಸಭೆ ನಡೆಸಿ ಭಾರತ ಸ್ವಾತಂತ್ರ್ಯ ದಿನಾಚರಣೆ ಎಲ್ಲ ಕಾರ್ಯಕ್ರಮಗಳನ್ನು ಯೋಜಿತವಾಗಿ ರೂಪಿಸಿಕೊಂಡು ತಮಗೆ ವಹಿಸಲಾದ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ಸೂಚನೆ ನೀಡಿದರು.ಸರ್ಕಾರದ ಶಿಷ್ಟಾಚಾರದ ಮಾರ್ಗಸೂಚಿಗಳನ್ವಯ ಸ್ವಾತಂತ್ರೋತ್ಸವ ಸಮಾರಂಭದ ಆಹ್ವಾನ ಪತ್ರಿಕೆ ಮುದ್ರಿಸಿ, ಮುದ್ರಿತ ಆಹ್ವಾನ ಪತ್ರಿಕೆಗಳನ್ನು ಎಲ್ಲ ಗಣ್ಯರಿಗೆ ಸಮರ್ಪಕವಾಗಿ ತಲುಪಿಸಬೇಕು. ಶಿಷ್ಟಾಚಾರದಂತೆ ಗಣ್ಯರನ್ನು ವೇದಿಕೆಗೆ ಕರೆತಂದು ಯಾವುದೇ ಗೊಂದಲಗಳಿಗೆ ಅನುವು ಮಾಡಿಕೊಡದಂತೆ ಅವರಿಗೆ ಮೀಸಲಿರಿಸಿದ ಆಸನಗಳಲ್ಲಿ ಕೂರಿಸಲು ಸಂಬಂಧಪಟ್ಟ ಅಧಿಕಾರಿಗಳು ಅಗತ್ಯ ಕ್ರಮಕೈಗೊಳ್ಳಬೇಕು, ವೇದಿಕೆಯಲ್ಲಿ ಶಿಷ್ಟಾಚಾರ ಪಾಲಿಸಲು ಸೂಕ್ತ ಕ್ರಮ ವಹಿಸಬೇಕು ಎಂದು ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಅವರಿಗೆ ಸೂಚನೆ ನೀಡಿದರು.

ಸ್ವಾತಂತ್ರೋತ್ಸವ ಕಾರ್ಯಕ್ರಮ ನಡೆಯುವ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದ ಆವರಣವನ್ನು ಸ್ವಚ್ಛಗೊಳಿಸಿ ಮೈದಾನದಲ್ಲಿ ಸ್ವಾಗತ ಕಮಾನು ವ್ಯವಸ್ಥೆ, ದೀಪಾಲಂಕಾರ, ಉತ್ತಮ ಧ್ವನಿವರ್ಧಕ ಮತ್ತು ಕುಡಿಯುವ ನೀರು ವ್ಯವಸ್ಥೆ, ತೋಟಗಾರಿಕೆ ಇಲಾಖೆಯಿಂದ ಹೆಚ್ಚಿನ ಆಕರ್ಷಣೆಯುಳ್ಳ ಹೂವಿನ ಕುಂಡಗಳನ್ನು ಪಡೆದು ವೇದಿಕೆ ಹಾಗೂ ಧ್ವಜಸ್ತಂಭದ ಸುತ್ತಲು ಸಿಂಗರಿಸಬೇಕು. ಸ್ವಾತಂತ್ರ್ಯ ಹೋರಾಟಗಾರರು, ಅಧಿಕಾರಿಗಳು, ಮಾಧ್ಯಮದವರು, ಗಣ್ಯರು ಆಸಿನರಾಗಲು ಪ್ರತ್ಯೇಕವಾಗಿ ಸೂಕ್ತ ಆಸನದ ವ್ಯವಸ್ಥೆಯನ್ನು ಮಾಡಿಕೊಳ್ಳಬೇಕು. ಮೈದಾನದಲ್ಲಿ ಅಗತ್ಯಕ್ಕೆ ಅನುಸಾರವಾಗಿ ತಾತ್ಕಾಲಿಕವಾಗಿ ಮೊಬೈಲ್ ಶೌಚಾಲಯದ ವ್ಯವಸ್ಥೆ ಮಾಡುವಂತೆ ನಗರಸಭೆ ಪೌರಾಯುಕ್ತರಿಗೆ ಸೂಚನೆ ನೀಡಿದರು.

ಪಥ ಸಂಚಲನಕ್ಕೆ ಪೊಲೀಸ್ ಸಿಬ್ಬಂದಿ, ಹೋಂ ಗಾರ್ಡ್, ಅರಣ್ಯ ಇಲಾಖೆ, ಅಬಕಾರಿ, ಎನ್‌ಸಿಸಿ ಹಾಗೂ ಪ್ರೌಢಶಾಲಾ ಮಕ್ಕಳು ಸೇರಿದಂತೆ ಉತ್ತಮ ತುಕಡಿಗಳನ್ನು ಪರೇಡ್ ವ್ಯವಸ್ಥೆಗೆ ಸಜ್ಜುಗೊಳಿಸಬೇಕು. ಪಥಸಂಚಲನದಲ್ಲಿ ಭಾಗಹಿಸುವ ತಂಡಗಳಿಗೆ ಉತ್ತಮವಾಗಿ ತರಬೇತಿ ನೀಡಿ, ಪಥಸಂಚಲನವನ್ನು ಬಹಳ ಶಿಸ್ತಿನಿಂದ ನಡೆಸಲು ಮೂರು ದಿನಗಳ ತರಬೇತಿ ನೀಡುವಂತೆ ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಷ್ಟ್ರಧ್ವಜಾರೋಹಣದ ನಂತರ ಶಾಲಾ ಮಕ್ಕಳಿಂದ ಬೆಳಿಗ್ಗೆ 3 ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಾಗೂ ನಗರದ ತರಾಸು ರಂಗಮಂದಿರದಲ್ಲಿ ಸಂಜೆಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಜನಾಕರ್ಷಣೀಯವಾಗಿ ದೇಶಭಕ್ತಿ ಬಿಂಬಿಸುವಂತಹ ಕಾರ್ಯಕ್ರಮ ವ್ಯವಸ್ಥೆಗೊಳಿಸಬೇಕು, ಇದರ ಜೊತೆಗೆ ಜಿಲ್ಲೆಯ ಸ್ಥಳೀಯ ಕಲಾವಿದರಿಂದಲೂ ಒಂದು ಸಾಂಸ್ಕೃತಿಕ ಕಾರ್ಯಕ್ರಮ ಆಯೋಜನೆಗೆ ಕ್ರಮವಹಿಸಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಿಗೆ ಸೂಚನೆ ನೀಡಿದರು. ಶಾಲೆಗಳಲ್ಲಿ ಮಕ್ಕಳಿಗೆ ಸಿಹಿ ವಿತರಿಸಲು ಕ್ರಮ ವಹಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಿಗೆ ಸೂಚನೆ ನೀಡಿದರು.

ಎಲ್ಲ ಸರ್ಕಾರಿ ಕಟ್ಟಡಗಳಲ್ಲಿ ತಪ್ಪದೇ ವಿದ್ಯುತ್ ದೀಪಾಲಂಕಾರಗಳನ್ನು ಮಾಡಬೇಕು. ನಗರದ ಪ್ರಮುಖ ವೃತ್ತಗಳಲ್ಲಿ ಎಲ್‌ಇಡಿ ದೀಪಾಲಂಕಾರ ಅಳವಡಿಸಿಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಭಾರತ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿ ತ್ಯಾಗ ಬಲಿದಾನವನ್ನು ಮಾಡಿದ ನಮ್ಮ ಹಿರಿಯರನ್ನು ಸ್ಮರಿಸುವ ಮತ್ತು ಗೌರವಿಸುವ ಹಾಗೂ ದೇಶಪ್ರೇಮ, ದೇಶಭಕ್ತಿಯ ಪ್ರತೀಕವಾದ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರತಿಯೊಬ್ಬ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಕಡ್ಡಾಯವಾಗಿ ಭಾಗವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಮಾತನಾಡಿ, ಸರ್ಕಾರದ ಸೂಚನೆಯಂತೆ ಆಗಸ್ಟ್ 15 ರ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ನೆರವೇರಿಸುವ ರಾಷ್ಟ್ರಧ್ವಜಾರೋಹಣ ಸಂದರ್ಭದಲ್ಲಿ ರಾಷ್ಟ್ರಪಿತ ಮಹಾತ್ಮಾ ಗಾಂಧಿ ಹಾಗೂ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರವನ್ನು ಇರಿಸಿ, ಗೌರವ ಸಮರ್ಪಣೆ ಮಾಡಬೇಕು. ಆಗಸ್ಟ್ 15 ರಂದು ಸಂಗೊಳ್ಳಿ ರಾಯಣ್ಣ ಅವರ ಜಯಂತಿ ಕೂಡ ಇದ್ದು, ಅಂದು ಸಂಗೊಳ್ಳಿ ರಾಯಣ್ಣ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಕಾರ್ಯಕ್ರಮ ಆಚರಿಸಲಾಗುವುದು. ಅಂದು ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ವಿಶೇಷ ಅಲಂಕಾರ ಕೈಗೊಳ್ಳುವಂತೆಯೂ ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

---

## ಶಿವಯೋಗಿಸ್ವಾಮೀಜಿಯವರ ಮಹಾನ್‌ಸಾಧನೆ ಸಮಾಜದಲ್ಲಿ ಧಾರ್ಮಿಕ ಜಾಗೃತಿ ಮೂಡಿಸುವಲ್ಲಿ ಯಶಸ್ವಿ

» ಚಳ್ಳಕೆರೆ



ರಾಜ್ಯ ಸರ್ಕಾರ ಅನೇಕ ಮಹಾನೀಯರು ಸಮಾಜಕ್ಕೆ ನೀಡಿದ ಕೊಡುಗೆಗಳ ಬಗ್ಗೆ ನೆನಪಿಸಿಕೊಳ್ಳುವ ಸಲುವಾಗಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಸಹಯೋಗದಲ್ಲಿ ಕಾರ್ಯಕ್ರಮಗಳನ್ನು ರೂಪಿಸುವ ಮೂಲಕ ಅವರು ಈ ಸಮಾಜಕ್ಕೆ ಸಲ್ಲಿಸಿದ ಸೇವೆಯ ಬಗ್ಗೆ ತಿಳಿಸುವ ಪ್ರಯತ್ನ ಮಾಡುತ್ತಿದ್ದು, ಶಿವಯೋಗಿಸ್ವಾಮೀಜಿಯವರೂ ಸಹ ಅಂತಹ ಮಹಾನ್ ಪುರುಷರಲ್ಲಿ ಒಬ್ಬರಾಗಿದ್ದರು ಎಂದು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ತಾಲ್ಲೂಕು ಅಧ್ಯಕ್ಷ, ತಹಶೀಲ್ದಾರ್ ರೇಹಾನ್‌ಪಾಷ ತಿಳಿಸಿದರು.

ಅವರು, ಗುರುವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಶಿವಯೋಗಿಸ್ವಾಮೀಜಿಯವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಶಿವಯೋಗಿಸ್ವಾಮೀಜಿಯವರು ಸಮಾಜದಲ್ಲಿ ಶೋಷಣೆಗೆ ಒಳಗಾದ ಜನರನ್ನು ಗುರುತಿಸಿ ಅವರಿಗೆ ಧಾರ್ಮಿಕ ವಿಚಾರಗಳ ಬಗ್ಗೆ ಮಾರ್ಗದರ್ಶನ ಮಾಡುತ್ತಿದ್ದ ಮಹಾನ್‌ಪುರುಷ ಎಂದರು.

ಉಪನ್ಯಾಸ ನೀಡಿದ ನಿವೃತ್ತ ಪ್ರಾಧ್ಯಾಪಕ ಟಿ.ನಾಗರಾಜು, ಶಿವಯೋಗಿ ಸ್ವಾಮೀಜಿಯವರು ಭಕ್ತಿ, ಶ್ರೆದ್ದೆಯಿಂದಲೇ ಗುರುವನ್ನು ಒಲಿಸಿಕೊಳ್ಳಬಹುದು ಎಂಬುವುದನ್ನು ತೋರಿಸಿಕೊಟ್ಟವರು. ಅವರ ವಿಚಾರಧಾರೆಗಳು ಎಲ್ಲರಿಗೂ ಸ್ಪೂರ್ತಿದಾಯಕ, ಧಾರ್ಮಿಕ ಶಕ್ತಿಯಿಂದ ಮಾತ್ರ ನಾವು ಹೆಚ್ಚು ಒಳಿತನ್ನು ಪಡೆಯಬಹುದು ಎಂಬುವುದನ್ನು ತೋರಿಸಿಕೊಟ್ಟವರು. ಇವರ ಆದರ್ಶಮಯ ಬದುಕು ಎಲ್ಲರಿಗೂ ಸ್ಪೂರ್ತಿದಾಯಕವೆಂದರು.

ನಗರಸಭೆ ಹಿರಿಯ ಆರೋಗ್ಯ ನಿರೀಕ್ಷಕರಾದ ಗಣೇಶ್, ಸುನೀಲ್, ಲೀಲಾವತಿ, ಕಂದಾಯಾಧಿಕಾರಿ ತಿಪ್ಪೇಸ್ವಾಮಿ, ಗ್ರಾಮ ಲೆಕ್ಕಾಧಿಕಾರಿ ಪ್ರಕಾಶ್, ಡಿ.ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

### ಬಾಲ್ಯ ವಿವಾಹ: ಆರೋಪಿ ವಿರುದ್ಧ ಎಫ್.ಐ.ಆರ್ ದಾಖಲು

**ಚಿತ್ರದುರ್ಗ:** ಚಿತ್ರದುರ್ಗ ತಾಲ್ಲೂಕಿನಲ್ಲಿ ಬಚ್ಚಬೋರನಟ್ಟಿ ಗ್ರಾಮದ ಬಾಲ್ಯ ವಿವಾಹ ಪ್ರಕರಣದಲ್ಲಿ ಅಪ್ರಾಪ್ತ ಬಾಲಕಿಯ ಮದುವೆಯಾದ ಆರೋಪಿ ವಿರುದ್ಧ ಎಫ್.ಐ.ಆರ್ ದಾಖಲಿಸಲಾಗಿದೆ. ಹಿರಿಯೂರು ತಾಲ್ಲೂಕಿನ ಯಲ್ಲಕರನಹಳ್ಳಿ ಗ್ರಾಮದ ಹರೀಶ್ ಬಿನ್ ಪಾಲಯ್ಯ ಚಳ್ಳಕೆರೆ ತಾಲ್ಲೂಕಿನ ನಾಯಕನಹಟ್ಟಿಯಲ್ಲಿ ಅಪ್ರಾಪ್ತ ಬಾಲಕಿಯನ್ನು ಬಾಲ್ಯ ವಿವಾಹವಾಗಿದ್ದ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಘಟನೆಯನ್ನು ಪರಿಶೀಲಿಸಿ, ಚಳ್ಳಕೆರೆ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ವರದಿ ಕಳುಹಿಸಿಕೊಡಲಾಗಿತ್ತು. ಇದನ್ನು ಆಧರಿಸಿ ಜುಲೈ 29 ರಂದು ನಾಯಕನಹಟ್ಟಿ ಪೊಲೀಸ್ ಠಾಣೆಯಲಿ, ಬಾಲ್ಯ ವಿವಾಹ ನಿಷೇಧ ಕಾಯ್ದೆ–2006ರ ಪ್ರಕಾರ ಆರೋಪಿ ಹರೀಶ್ ವಿರುದ್ಧ ಚಳ್ಳಕೆರೆ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಕರಣ ದಾಖಲಿಸಿದ್ದಾರೆ .

## ಅಕ್ಷರ ದಾಸೋಹದ ಸಹಾಯಕ ನಿರ್ದೇಶಕರಾಗಿ ಶಾಂತಪ್ಪ ನೇಮಕ



» ಹೊಸದುರ್ಗ

ಪಟ್ಟಣದ ತಾ.ಪಂ. ಕಚೇರಿಯ ಆವರಣದಲ್ಲಿರುವ ಅಕ್ಷರ ದಾಸೋಹದ ಸಭಾಂಗಣದಲ್ಲಿ ಈ ಹಿಂದೆ ತಾಲೂಕು ಸಹಾಯಕ ನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದ ಪರಮೇಶ್ವರಪ್ಪ ಬೇರೆಡೆಗೆ ವರ್ಗಾವಣೆಗೊಂಡ ಹಿನ್ನೆಲೆ, ಗುರುವಾರ ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸಿನ್, ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ ಶ್ರೀನಿವಾಸ್ ಹಾಗೂ ಇತರರ ಸಮ್ಮುಖದಲ್ಲಿ ತಾಲೂಕು ಅಕ್ಷರ ದಾಸೋಹದ ನೂತನ ಸಹಾಯಕ ನಿರ್ದೇಶಕರಾಗಿ ಆರ್. ಶಾಂತಪ್ಪ ಅಧಿಕಾರ ವಹಿಸಿಕೊಂಡರು.

ನೂತನ ಸಹಾಯಕ ನಿರ್ದೇಶಕರಾಗಿ ಅಧಿಕಾರ ವಹಿಸಿಕೊಂಡ ಬಳಿಕ ಆರ್. ಶಾಂತಪ್ಪ ಮಾತನಾಡಿ, ನಾನು ಜನಿಸಿದ ತಾಲ್ಲೂಕಿನಲ್ಲಿಯೇ ಮಹತ್ವದ ಇಲಾಖೆಯ ಜವಾಬ್ದಾರಿ ಹೊತ್ತು, ಸೇವೆ ಮಾಡುವ ಅವಕಾಶ ದೊರೆತಿರುವುದು ಸಂತಸ ತಂದಿದೆ. ತಾಲೂಕಿನಲ್ಲಿ ಒಳ್ಳೆಯ ಶಾಸಕರು, ಬಿಇಓ, ಬಿಆರ್ ಸಿ ಮತ್ತು ಶಿಕ್ಷಕರಿದ್ದು, ಇವರೆಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಒಳ್ಳೆಯ ಕಾರ್ಯಗಳನ್ನು ಮಾಡಲು ಬಯಸಿದ್ದೇನೆ. 8 ವರ್ಷಗಳ ಕಾಲ ಪ್ರೌಢಶಾಲಾ ಮುಖ್ಯ ಶಿಕ್ಷಕನಾಗಿ ಸೇವೆ ಸಲ್ಲಿಸಿದ ಬಳಿಕ, ಪ್ರಧಾನ್ ಮಂತ್ರಿ ಪೋಷಣ್ ಅಭಿಯಾನ ಯೋಜನೆಯಡಿ ನಡೆಸುವ ಪರೀಕ್ಷೆ ಎದುರಿಸಿ, ತೇರ್ಗಡೆಹೊಂದಿ ನೇರವಾಗಿ ಹೊಸದುರ್ಗಕ್ಕೆ ನೇಮಕವಾಗಿದ್ದೇನೆ. ನಾನು ಜವಾಬ್ದಾರಿ ವಹಿಸಿಕೊಂಡಿರುವ ಇಲಾಖೆಯ ಕಾರ್ಯವ್ಯಾಪ್ತಿ ಬಹಳ ಮಹತ್ವದ್ದಾಗಿದ್ದು, ಜವಾಬ್ದಾರಿಯುತವಾಗಿ ನಿರ್ವಹಿಸಿ, ಇಲಾಖೆಗೆ ಒಳ್ಳೆಯ ಹೆಸರು ತರಲು ಶ್ರಮಿಸುವೆ ಎಂದರು.

---

**ಪ್ರಮುಖ ಸುದ್ದಿ**

#### ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮ– ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಡಿ.ಎಂ.ಅಭಿನವ್

# ತಾಯಿಯ ಎದೆ ಹಾಲು ಮಗುವಿಗೆ ಅಮೃತ ಧಾರೆ

» ಚಿತ್ರದುರ್ಗ




ತಾಯಿಯ ಎದೆ ಹಾಲು ಮಗುವಿಗೆ ಅಮೃತ ಧಾರೆ. ತಾಯಿ ಎದೆ ಹಾಲಿನಲ್ಲಿ ಅಪರಿಮಿತವಾದ ಪೋಷಕಾಂಶಗಳು ಅಡಗಿವೆ. ಮಗುವಿಗೆ ರೋಗ ನಿರೋಧಕ ಶಕ್ತಿ ಹೆಚ್ಚಿಸುತ್ತದೆ ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ. ಅಭಿನವ್ ಹೇಳಿದರು.

ಇಲ್ಲಿನ ಬುದ್ಧ ನಗರದ ನಗರ ಆರೋಗ್ಯ ಕೇಂದ್ರದಲ್ಲಿ ಗುರುವಾರ ವಿಶ್ವಸ್ತನ್ಯಪಾನ ಸಪ್ತಾಹ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರತಿ ವರ್ಷ ಆಗಸ್ಟ್ ತಿಂಗಳ ಮೊದಲನೇ ವಾರ ವಿಶ್ವ ಸ್ತನ್ಯಪಾನ ಸಪ್ತಾಹ ಆಚರಿಸಲಾಗುತ್ತದೆ. ಹುಟ್ಟಿದ ತಕ್ಷಣ ಮಗುವಿಗೆ ಎಷ್ಟು ಬೇಗ ಸಾಧ್ಯವೋ ಅಷ್ಟು ಬೇಗ ಎದೆ ಹಾಲು ಕುಡಿಸಬೇಕು. ಎದೆ ಹಾಲು ಕೊಡುವುದರಿಂದ ತಾಯಿ ಮತ್ತು ಮಗುವಿನ ಮಧ್ಯೆ ಉತ್ತಮವಾದ ಗಟ್ಟಿಯಾದ ಬಾಂಧವ್ಯ ಬೆಸೆಯುತ್ತದೆ ಎಂದರು.

ಮಗುಹುಟ್ಟಿದಾಗಿನಿಂದ6ತಿಂಗಳವರೆಗೂ ಎದೆಹಾಲನ್ನು ಬಿಟ್ಟು ಬೇರೆ ಏನನ್ನೂ ಕುಡಿಸಬಾರದು. ಆಗ ಮಾತ್ರ ಸಾರ್ಥಕ ಎನಿಸುತ್ತದೆ. ಕೊರತೆಗಳನ್ನು ಕೊನೆಗಾಣಿಸಿ ತಾಯಂದಿರಿಗೆ ಎದೆ ಹಾಲುಣಿಸಲು ಪ್ರೋತ್ಸಾಹ ನೀಡಿ ಎಂದು ಹೇಳಿದರು. ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಜೆ.ಗೌರಮ್ಮ ಮಾತನಾಡಿ, ಮಗುವಿನ ಆರೋಗ್ಯ ಮತ್ತು ಬದುಕುಳಿಯುವಿಕೆ ಖಚಿತಪಡಿಸಿಕೊಳ್ಳಲು ಸ್ತನ್ಯಪಾನವು ಅತ್ಯಗತ್ಯ ಅಭ್ಯಾಸವಾಗಿದೆ. ಆದಾಗ್ಯೂ, ವಿಶ್ವ ಆರೋಗ್ಯ ಸಂಸ್ಥೆಯ ಶಿಫಾರಸ್ಸುಗಳ ಹೊರತಾಗಿಯೂ, 6 ತಿಂಗಳೊಳಗಿನ ಶಿಶುಗಳಲ್ಲಿ ಅರ್ಧಕ್ಕಿಂತ ಕಡಿಮೆ ಶಿಶುಗಳು ಪ್ರತ್ಯೇಕವಾಗಿ ಸ್ತನ್ಯಪಾನ ಮಾಡುತ್ತಾರೆ. ಎದೆಹಾಲು ಶಿಶುಗಳಿಗೆ ಸಂಪೂರ್ಣ ಮತ್ತು ಸುರಕ್ಷಿತ ಆಹಾರವಾಗಿದ್ದು, ಸಾಮಾನ್ಯ ಬಾಲ್ಯದ ಕಾಯಿಲೆಗಳಿಂದ ರಕ್ಷಿಸುವ ಅಗತ್ಯ ಪ್ರತಿಕಾಯಗಳನ್ನು ಹೊಂದಿರುತ್ತದೆ. ಇದು ಜೀವನದ ಆರಂಭಿಕ ತಿಂಗಳುಗಳಲ್ಲಿ ಅಗತ್ಯವಿರುವ ಎಲ್ಲಾ ಶಕ್ತಿ ಮತ್ತು ಪೋಷಕಾಂಶ ಒದಗಿಸುವ ಜತೆಗೆ ಮುಂದಿನ ವರ್ಷಗಳಲ್ಲಿ ಪೌಷ್ಟಿಕಾಂಶದ ಗಮನಾರ್ಹ ಮೂಲವಾಗಿ ಮುಂದುವರಿಯುತ್ತದೆ ಎಂದು ತಿಳಿಸಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾತನಾಡಿ, ವಿಶ್ವಸ್ತನ್ಯಪಾನ ಸಪ್ತಾಹ ಅಭಿಯಾನವು ಹಾಲುಣಿಸುವ ತಾಯಂದಿರಿಗೆ ಕುಟುಂಬಗಳು, ಸಮುದಾಯ, ಸಮಾಜ ಮತ್ತು ಆರೋಗ್ಯ ವೃತ್ತಿಪರರಿಂದ ಬೆಂಬಲದ ಪ್ರಾಮುಖ್ಯತೆಯನ್ನು ಒತ್ತಿ ಹೇಳುತ್ತದೆ. ಸ್ತನ್ಯಪಾನ ಮಾಡುವ ಮಕ್ಕಳು ಉತ್ತಮ ಅರಿವಿನ ಕಾರ್ಯಕ್ಷಮತೆ ಹೊಂದಿರುತ್ತಾರೆ. ಸ್ತನ್ಯಪಾನ ಮಾಡುವ ಮಹಿಳೆಯರು ಸ್ತನ ಮತ್ತು ಅಂಡಾಶಯದ ಕ್ಯಾನ್ಸರ್‌ಗಳ ಅಪಾಯ ಕಡಿಮೆ ಎಂದು ತಿಳಿಸಿದರು.

ಬುದ್ಧನಗರ ನಗರ ಆರೋಗ್ಯ ಕೇಂದ್ರದ ಡಾ.ಸುರೇಂದ್ರ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಪೂರಕ ಪೌಷ್ಟಿಕ ಆಹಾರದ ಬಗ್ಗೆ ತಿಳಿಸಿದರು. ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಉಷಾ ಮಗುವನ್ನು ಹಾಲು ಕುಡಿಸುವಾಗ ಎತ್ತಿಕೊಳ್ಳುವ ಬಂಗಿಯ ಪ್ರಾತ್ಯಕ್ಷಿಕೆ ನೀಡಿದರು.ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ, ಜಿಲ್ಲಾ ವ್ಯವಸ್ಥಾಪಕರಾದ ಕರಕಪ್ಪ ಮೇಟಿ, ವಿರೇಶ್, ಅರ್ಜುನ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಗುರು ಮೂರ್ತಿ, ಕೋಟಿ, ಆಶಾ ಕಾರ್ಯಕರ್ತೆಯರು, ತಾಯಿ ಮಕ್ಕಳು ಇದ್ದರು.

# ಹೊಳಲ್ಕೆರೆ: ವಸತಿ ಶಾಲೆಗೆ ಹಾಸ್ಟೆಲ್ ಕೊರತೆ

» ಎಸ್.ವೇದಮೂರ್ತಿ



ಹೊಳಲ್ಕೆರೆ: ಅರೆಮಲ್ನಾಡು ಖ್ಯಾತಿಯ ಹೊಳಲ್ಕೆರೆ ಜಿಲ್ಲೆಯ ಶೈಕ್ಷಣಿಕಾಭಿವೃದ್ಧಿಗೆ ಸಾಕಷ್ಟು ಕೊಡುಗೆ ನೀಡಿದೆ. ಜಿಲ್ಲೆಯ ಅತಿ ಹೆಚ್ಚು ವಸತಿಯುಕ್ತ ಶಾಲೆಗಳು ಇಲ್ಲಿ ಕಾಣಸಿಗುತ್ತವೆ. ತಾಲೂಕಿನಲ್ಲಿ ಮೊರಾರ್ಜಿ, ಕಿತ್ತೂರು ರಾಣಿ ಚನ್ನಮ್ಮ, ಕಸ್ತೂರ ಭಾ, ಇಂದಿರಾಗಾಂಧಿ, ಅಲೆಮಾರಿ ಹೀಗೆ ನಾನಾ ಯೋಜನೆಯಡಿ ಅರಂಭಗೊಂಡ ವಸತಿಯಕ್ತ ಶಾಲೆ ಕಾಲೇಜುಗಳು ಜಿಲ್ಲೆಯ ಸಾವಿರಾರು ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುತ್ತಿದ್ದರೂ ನೂರಾರು ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಕಲ್ಪಿಸಬೇಕಿದ್ದ ತಾಲೂಕಿನ ಮಲ್ಲಾಡಿಹಳ್ಳಿ ಸರಕಾರಿ ವಸತಿಯುಕ್ತ ಪ್ರಥಮ ದರ್ಜೆ ಕಾಲೇಜು ಇದಕ್ಕೆ ಅಪವಾದ ಎನ್ನುವಂತಾಗಿದೆ.

ಎಸ್ಸಿಎಸ್ಟಿ ಇತರೆ ವರ್ಗದ ಬಡ ಮಕ್ಕಳಿಗೆ ಮರಿಚಿಕೆಯಾಗಿದ್ದ, ಪದವಿ ಶಿಕ್ಷಣ ಕಲ್ಪಿಸಲು ವಸತಿಯುಕ್ತ ಕಾಲೇಜು ಶಿಕ್ಷಣ ಸೌಲಭ್ಯ ಕಲ್ಪಿಸುವ ಹೊಸ ಕಲ್ಪನೆ ಹಿನ್ನಲೆಯಲ್ಲಿ ಆಗಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಸಮಾಜ ಕಲ್ಯಾಣ ಸಚಿವರಾಗಿದ್ದ ಹೆಚ್.ಆಂಜನೇಯ ಇವರ ನೇತೃತ್ವದಲ್ಲಿ 2017-18 ನೇ ಸಾಲಿನಲ್ಲಿ 10 ಕಾಲೇಜು ಪ್ರಾರಂಭಿಸಲು ಕ್ಯಾಬಿನೆಟ್ ಅನುಮೋದನೆ ಪಡೆದ ಸಮಾಜ ಕಲ್ಯಾಣ ಇಲಾಖೆ, ರಾಜ್ಯದಲ್ಲಿ ಮೊದಲ ಭಾರಿಗೆ ವಸತಿಯುಕ್ತ ಪದವಿ ಶಿಕ್ಷಣ ವ್ಯವಸ್ಥೆ ಜಾರಿಗೆ ರಾಜ್ಯದ ನಾನಾ ಭಾಗದಲ್ಲಿ 10 ಪದವಿ ಕಾಲೇಜುಗಳನ್ನು 2018-19 ರಲ್ಲಿ ಆರಂಭಿಸಿತ್ತು. ಶೇ60 ರಷ್ಟು ಎಸ್ಸಿಎಸ್ಟಿ ಮಕ್ಕಳಿಗೂ ಶೇ40ರಷ್ಟು ಇತರೆ ವರ್ಗಕ್ಕೆ ಪ್ರವೇಶಾವಕಾಶ ಮಿಸಲಿರಿಸಿತ್ತು.

ಈ ಹಿನ್ನಲೆಯಲ್ಲಿ ತಾಲೂಕಿನ ಮಲ್ಲಾಡಿಹಳ್ಳಿ ಹತ್ತಿರ 8 ಎಕರೆ ಪ್ರದೇಶದಲ್ಲಿ ಸುಮಾರು 30 ಕೋಟಿ ಅನುದಾನ ವ್ಯಯಿಸಿ ಸರಕಾರಿ ವಸತಿಯುಕ್ತ ಪ್ರಥಮ ದರ್ಜೆ ಕಾಲೇಜು ಕಟ್ಟಿದ ಸರಕಾರ, ವಿಶ್ವವಿದ್ಯಾನಿಲಯಗಳಿಂದ ಪದವಿ ತರಗತಿ ಆರಂಭಿಸಲು ಸಂಯೋಜನೆ ಕಲ್ಪಿಸಿತ್ತು. 2019 ನೇ ಸಾಲಿನಿಂದ ಶೈಕ್ಷಣಿಕ ಚಟುವಟಿಕೆಗೆ ಪ್ರವೇಶಾರಂಭಕ್ಕೆ ಚಾಲನೆ ನೀಡಲಾಗಿತ್ತು.

ಅದರೆ ಸರಕಾರ ಕಾಲೇಜು ಅರಂಭಿಸಿದ್ದು ಬಿಟ್ಟರೆ ವಸತಿ ನಿಲಯ ಆರಂಭಕ್ಕೆ ಸೂಕ್ತ ಸುತ್ತೂಲೆ ಹೊರಡಿಸದ ಪರಿಣಾಮ ವಿದ್ಯಾರ್ಥಿಗಳಿಗೆ ಶಿಕ್ಷಣದ ಜತೆ ಊಟ, ವಸತಿ, ಆಟ, ಪಾಠದ ಸೌಲಭ್ಯ ಇಲ್ಲದಂತಾಗಿ ಕಾಲೇಜುಗಳು ಆರಂಭಿಸುವ ಮುನ್ನವೆ ಮುಚ್ಚುವಂತ ಸ್ಥಿತಿ ತಲುಪಿವೆ.

**ಹಾಸ್ಟಲ್ ಇಲ್ಲದೆ ಪದವಿ ಪ್ರವೇಶ ಕುಸಿತ :** ಇಲ್ಲಿ ಕಲಾ,ವಿಜ್ಞಾನ,ವಾಣೀಜ್ಯವಿಭಾಗದಲ್ಲಿ 350 ವಿದ್ಯಾರ್ಥಿಗಳ ಪ್ರವೇಶಕ್ಕೆ ಅವಕಾಶವಿದೆ. ಪ್ರವೇಶಕ್ಕೆ ಬಹುಬೇಡಿಕೆ ಕಾಲೇಜಿಗೆ ಇದೆ. ಚಿತ್ರದುರ್ಗ, ಶಿವಮೊಗ್ಗ, ಚಿಕ್ಕಮಂಗಳೂರು ಜಿಲ್ಲೆಯ ಸಾವಿರಾರು ವಿದ್ಯಾರ್ಥಿಗಳು ಇಲ್ಲಿನ ಪ್ರವೇಶಕ್ಕೆ ಬರುತ್ತಿದ್ದಾರೆ. ದೂರದ ಊರುಗಳಿಂದ ಬಂದ ವಿದ್ಯಾರ್ಥಿಗಳಿಗೆ ಹಾಸ್ಟಲ್ ಸೌಲಭ್ಯವಿಲ್ಲದೆ ವಾಪಾಸು ಹೊಗುತ್ತಿದ್ದಾರೆ. ಇದು ಪದವಿ ಪ್ರವೇಶಕ್ಕೆ ಸಂಚಕಾರ ತಂದೊಡ್ಡಿದ್ದು, ಸುತ್ತಮುತ್ತಲ ಹಳ್ಳಿಗಳ ಹತ್ತಾರು ವಿದ್ಯಾರ್ಥಿಗಳಿಗೆ ಸಿಮಿತಗೊಂಡಿದೆ.

**ಆರಂಭಿಸಿ ಹಾಸ್ಟಲ್ :** ಸರಕಾರ ವಸತಿಯುಕ್ತ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸಿದಂತೆ ಹಾಸ್ಟಲ್ ಪ್ರಾರಂಭಿಸಿಲ್ಲ. ಹಾಸ್ಟಲ್‌ಗೆಂದು ಕಟ್ಟಿದ ಕಟ್ಟಡ ಅನಾಥವಾಗಿ ಪಾಳು ಬಿದ್ದಿದೆ. ಕಟ್ಟಡದಲ್ಲಿನ ಊಟದ ಹಾಲ್, ವಿದ್ಯಾರ್ಥಿ ಹಾಗೂ ವಿದ್ಯಾನಿಯರಿಗೆ ಪ್ರತ್ಯೇಕ ವಸತಿ ಗೃಹ, ವಾಚಾನಾಲಯ, ಪೀಠೋಪಕರಣ, ಕ್ರೀಡಾಂಗಣದ ದೂಳು ಬಿದ್ದಿವೆ. ಕಟ್ಟಡವು ಸಹಾ ನಿರ್ವಹಣೆ ಇಲ್ಲದೆ ಶಿಥಿಲಗೊಳ್ಳುತ್ತಿದೆ. ಹಾಸ್ಟಲ್ ಆರಂಭಿಸುಲು ಮುಖ್ಯಮಂತ್ರಿ, ರಾಜ್ಯ ಕಾರ್ಯದರ್ಶಿಗೂ ಸ್ಥಳೀಯರು ಮನವಿ ಸಲ್ಲಿಸಿದ್ದು ಇದೆ.

ಹಾಗಾಗಿ ಸರಕಾರ ವಿಶೇಷ ಕಾಳಜಿ ವಹಿಸಿ ರಾಜ್ಯದಲ್ಲಿರುವ 10 ಸರಕಾರಿ ವಸತಿಯುಕ್ತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಾಸ್ಟಲ್ ಆರಂಭಿಸಬೇಕಿದೆ. ವಸತಿಯುಕ್ತ ಕಾಲೇಜು ಒಕ್ಕೂಟ ಹಾಸ್ಟಲ್ ಪ್ರಾರಂಭಿಸಲು ಸರಕಾರಿ ಅದೇಶ ನೀಡಬೇಕೆಂದು ಸಾಕಷ್ಟು ಭಾರಿ ಸರಕಾರಕ್ಕೆ ಮನವಿ ಸಲ್ಲಿಸಿದ್ದರೂ ಸರಕಾರ ಮಾತ್ರ ಕಣ್ಮುಚ್ಚಿ ಕುಳಿತಿದೆ.

**ರಾಜ್ಯದಲ್ಲಿ ವಸತಿಯುಕ್ತ ಹತ್ತು ಕಾಲೇಜುಗಳು** : ದೇವರಾಯಸಮುದ್ರ ಕೋಲಾರ ಜಿಲ್ಲೆ, ಬೋಗಾಪುರ ಚಾಮರಾಜನಗರ ಜಿಲ್ಲೆ, ದೇವಗಿರಿ ಹಾವೇರಿ ಜಿಲ್ಲೆ, ಅಡಳಗೇರಿ, ವಿಜಯಪುರ ಜಿಲ್ಲೆ, ಕವಿತಾಳ ರಾಯಚೂರು ಜಿಲ್ಲೆ, ತಳಬಾಳ ಕೊಪ್ಪಳ ಜಿಲ್ಲೆ, ಹಾಲಹಳ್ಳಿ ಬೀದರ್ ಜಿಲ್ಲೆ, ಮುದ್ನಾಳ ಯಾದಗಿರಿ ಜಿಲ್ಲೆ, ಗುಂಡೇಪಲ್ಲಿ ಕಲುಬುರಗಿ ಜಿಲ್ಲೆ, ಮಲ್ಲಾಡಿಹಳ್ಳಿ ಚಿತ್ರದುರ್ಗ ಜಿಲ್ಲೆ.

> ವಿಶ್ವವಿದ್ಯಾನಿಲಯದ ಮಾದರಿ ಕಟ್ಟಡ, ಆವರಣ, ಕಾಲೇಜು, ಹಾಸ್ಟಲ್ ಕಟ್ಟಡ ಇದೆ. ಕಾಲೇಜು ಪ್ರಾರಂಭಗೊಂಡಿದೆ. ವಸತಿ ಸೌಲಭ್ಯಕ್ಕೆ ಹಾಸ್ಟಲ್ ಆರಂಭಿಸಲು ಸರಕಾರ ಅದೇಶ ಹೊರಡಿಸಬೇಕು. ಸಮಾಜ ಕಲ್ಯಾಣ ಇಲಾಖೆಗೆ ಹಾಸ್ಟಲ್ ನಿರ್ವಹಣೆಗೆ ಅವಕಾಶ ನೀಡಬೇಕು. ಸಾಕಷ್ಟು ಹೊರಾಟ ಕೈಗೊಂಡಿದ್ದರೂ ಸೂಕ್ತ ಅದೇಶವಿಲ್ಲದೆ 10 ಕಾಲೇಜಿನಲ್ಲಿ ಹಾಸ್ಟಲ್ ಆರಂಭಿಸಿಲ್ಲ.
>
> » **ಡಾ.ರವಿ ಪ್ರಾಂಶುಪಾಲರು.**

> ಈ ವಿಷಯ ನಮ್ಮ ಗಮನಕ್ಕೆ ಬಂದಿಲ್ಲ. ನಾನು ಈ ತಕ್ಷಣವೇ ಸರಕಾರದ ಗಮನಕ್ಕೆ ತಂದು ಕಾಲೇಜು ಹಾಸ್ಟಲ್ ಆರಂಭಿಸಲು ಆದೇಶ ಕೊಡಿಸುತ್ತೇನೆ. ಸಮಾಜ ಕಲ್ಯಾಣ ಇಲಾಖೆಯಿಂದ ಕ್ಷೇತ್ರದಲ್ಲಿ ಶೈಕ್ಷಣಿಕ ಆಭಿವೃದ್ಧಿ ಸಾಧಿಸಲು ಸಾಕಷ್ಟು ಶಾಲಾ ಕಾಲೇಜು ಹಾಸ್ಟಲ್ ಕಟ್ಟಿಸಿದ್ದೇನೆ. ಕಾಲೇಜು ಕಟ್ಟಡಕ್ಕೆ ವಿಶೇಷ ಅನುದಾನ ಕೊಡಿಸಿ ಕಟ್ಟಿಸಿದ್ದೇನೆ. ನನ್ನ ಗಮನಕ್ಕೆ ಬಂದಿದ್ದರೇ ಇಷ್ಟೋತ್ತಿಗೆ ಹಾಸ್ಟಲ್ ಆರಂಭಿಸಲು ಸರಕಾರಕ್ಕೆ ಮನವಿ ಮಾಡುತ್ತಿದ್ದೇ.
>
> » **ಹೆಚ್.ಆಂಜನೇಯ ಮಾಜಿ ಸಚಿವರು.**

## ತೆಂಗುಬೆಳೆಯಲ್ಲಿ ರೋಗ ಕೀಟ ಬಾದೆ: ಪೋಷಕಾಂಶ ನೀಡಿ ರೋಗ ನಿರೋಧಕ ಶಕ್ತಿ ಹೆಚ್ಚಿಸಲು ಸಲಹೆ

» ಚಿತ್ರದುರ್ಗ





ಜಿಲ್ಲೆಯ ತೆಂಗಿನ ಬೆಳೆಗಳಿಗೆ ರೋಗ ಮತ್ತು ಕೀಟದ ಬಾದೆ ಹೆಚ್ಚಾಗಿದೆ. ಇದರಿಂದ ಇಳುವರಿ ಕುಂಠಿತವಾಗುವ ಆತಂಕ ರೈತರಲ್ಲಿ ಕಾಡುತ್ತಿದ್ದು, ತೆಂಗಿನ ಗಿಡಗಳಿಗೆ ಸೂಕ್ತ ರೀತಿಯ ಪೋಷಕಾಂಶಗಳನ್ನು ನೀಡುವ ಮೂಲಕ ರೋಗ ನಿರೋಧಕ ಶಕ್ತಿ ಹೆಚ್ಚಿಸಿ, ಅಧಿಕ ಇಳುವರಿ ಪಡೆಯುವಂತೆ ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶರಣ ಬಸಪ್ಪ ಬೋಗಿ ರೈತರಿಗೆ ಸಲಹೆ ನೀಡಿದ್ದಾರೆ.

ತೆಂಗಿನ ಗಿಡಗಳಿಗೆ ವರ್ಷವಿಡೀ ಪೋಷಕಾಂಶಗಳ ಅವಶ್ಯಕತೆ ಇರುತ್ತದೆ. ತೆಂಗು ನಾಟಿ ಮಾಡಿದ ಮೊದಲನೇ ವರ್ಷದಿಂದ ಪೋಷಕಾಂಶಗಳನ್ನು ಗಿಡಗಳಿಗೆ ಕೊಡುವುದರಿಂದ ಸರ್ವತೋಮುಖ ಬೆಳವಣಿಗೆ, ಬೇಗನೆ ಹೂ ಬಿಡುವುದು ಮತ್ತು ಹೆಚ್ಚಿನ ಇಳುವರಿ ಪಡೆಯಬಹುದಾಗಿದೆ. ಸಂಶೋಧನೆ ಆಧಾರದ ಮೇಲೆ ಪೊಟಾಷ್ ರಾಸಾಯನಿಕ ತೆಂಗಿನ ಕಾಯಿಗಳ ಅಭಿವೃದ್ದಿಯಲ್ಲಿ ಮತ್ತು ಗಿಡದಲ್ಲಿ ರೋಗ ಮತ್ತು ಕೀಟಭಾದೆ ಪ್ರತಿರೋಧಕ ಶಕ್ತಿಯಲ್ಲಿ ಬೆಳಸುವಲ್ಲಿ ಪ್ರಧಾನ ಪಾತ್ರ ವಹಿಸುತ್ತದೆ. ಆದ್ದರಿಂದ ಗಿಡ ನೆಟ್ಟ ಎರಡನೇ ವರ್ಷದಿಂದ ಮುಂಗಾರು ಅವಧಿಯಲ್ಲಿ ಪ್ರತಿ ಗಿಡಕ್ಕೆ 135. ಗ್ರಾಂ, ಮೂರನೇ ವರ್ಷದಲ್ಲಿ 270.ಗ್ರಾಂ ಹಾಗೂ ನಾಲ್ಕು ಮತ್ತು ನಂತರದ ವರ್ಷದಲ್ಲಿ 400.ಗ್ರಾಂ ಪೊಟಾಷ್‌ಅನ್ನು ಗಿಡವೊಂದಕ್ಕೆ ನೀಡಬೇಕು. ಹಿಂಗಾರು ಅವಧಿಯಲ್ಲಿ ಪೊಟಾಷ್‌ನ್ನು ಮೊದಲನೇ ವರ್ಷಕ್ಕೆ 135. ಗ್ರಾಂ, ಎರಡನೇ ವರ್ಷಕ್ಕೆ 270.ಗ್ರಾಂ, ಮೂರನೇ ವರ್ಷಕ್ಕೆ 540.ಗ್ರಾಂ, ನಾಲ್ಕು ಮತ್ತು ನಂತರದ ವರ್ಷದಲ್ಲಿ 800.ಗ್ರಾಂ. ಪ್ರತಿ ಗಿಡಕ್ಕೆ ನೀಡಬೇಕು. ಇದೇ ಮಾದರಿಯಲ್ಲಿ ಮುಂಗಾರು ಅವಧಿಯಲ್ಲಿ ಎರಡನೇ ವರ್ಷಕ್ಕೆ ಸಾರಜನಕ 50.ಗ್ರಾಂ, ರಂಜಕ 40.ಗ್ರಾಂ, ಮೂರನೇ ವರ್ಷ ಸಾರಜನಕ 110.ಗ್ರಾಂ, ರಂಜಕ 80.ಗ್ರಾಂ, ನಾಲ್ಕು ಮತ್ತು ನಂತರದ ವರ್ಷಗಳಲ್ಲಿ ಸಾರಜನಕ 170. ಗ್ರಾಂ, ರಂಜಕ 120.ಗ್ರಾಂ ನೀಡಬೇಕು. ಇದರ ಜೊತೆಗೆ ಹಿಂಗಾರು ಅವಧಿಯಲ್ಲಿ ಮೊದಲನೇ ವರ್ಷ ಸಾರಜನಕ 50.ಗ್ರಾಂ, ರಂಜಕ 40.ಗ್ರಾಂ, ಎರಡನೇ ವರ್ಷ ಸಾರಜನಕ 110.ಗ್ರಾಂ, ರಂಜಕ 80.ಗ್ರಾಂ, ಮೂರನೇ ವರ್ಷ ಸಾರಜನಕ 220. ಗ್ರಾಂ, ರಂಜಕ 160.ಗ್ರಾಂ, ನಾಲ್ಕು ಹಾಗೂ ನಂತರದ ವರ್ಷದಲ್ಲಿ ಸಾರಜನಕ 330.ಗ್ರಾಂ, ರಂಜಕ 200.ಗ್ರಾಂ ಪ್ರತಿ ಗಿಡಕ್ಕೆ ನೀಡಬೇಕು. ಇದರೊಂದಿಗೆ 100.ಗ್ರಾಂ ಬೋರನ್, 500.ಗ್ರಾಂ ಮೆಗ್ನೀಶಿಯಂ ಸಲ್ಫೇಟ್ ಹಾಗೂ 250.ಗ್ರಾಂ ಜಿಂಕ್ ಸಲ್ಫೇಟ್‌ನ್ನು ಮಣ್ಣಿಗೆ ಸೇರಿಸುವುದರಿಂದ ಉತ್ತಮ ಇಳುವರಿ ಪಡೆಯಬಹುದು.

ಪ್ರತಿ ಗಿಡಕ್ಕೆ ಸಾವಯವ ಗೊಬ್ಬರಗಳಾದ ಎರೆಹುಳು ಗೊಬ್ಬರವನ್ನು 10 ಕೆ.ಜಿ, ಕಾಂಪೋಷ್ಟ್ ಅಥವಾ ಸಗಣಿ ಗೊಬ್ಬರವನ್ನು 50 ಕೆ.ಜಿ ಪ್ರತಿ ವರ್ಷ ಹಾಕಬೇಕು. ಹಸಿರೆಲೆ ಗೊಬ್ಬರಗಳ ಬೆಳೆಗಳಾದ ಸೆಣಬು, ಡಯಾಂಚ್, ಹಲಸಂದಿ ಮತ್ತು ಹುರಳಿ ಮುಂತಾದವುಗಳನ್ನು ಮಳೆಗಾಲದ ಪ್ರಾರಂಭ ಹಂತದಲ್ಲಿ ತೋಟಗಳಲ್ಲಿ ಬಿತ್ತನೆ ಮಾಡಿ, ಹೂ ಬಿಡುವ ಮುಂಚೆ ಉಳುಮೆ ಮಾಡಿ ಮಣ್ಣಿಗೆ ಸೇರಿಸುವುದರಿಂದ ಫಲವತ್ತತೆಯನ್ನು ಕಾಪಾಡಿಕೊಳ್ಳಬಹುದು. ಈ ನಿರ್ವಹಣಾ ಕ್ರಮಗಳನ್ನು ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಸಮೀಪದ ತೋಟಗಾರಿಕೆ ಇಲಾಖೆ ಕಛೇರಿಯನ್ನು ಸಂಪರ್ಕಿಸುವಂತೆ ಉಪನಿರ್ದೇಶಕ ಶರಣ ಬಸಪ್ಪ ಬೋಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಂಬಾಕು ಉತ್ಪನ್ನ ಮಾರಾಟ ಅಂಗಡಿಗಳಿಗೆ ದಾಳಿ



» ಚಿತ್ರದುರ್ಗ

ಕೋಟ್ಪಾ-2003ರ ಕಾಯ್ದೆಯ ಕುರಿತು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಹೊಸದುರ್ಗ ತಾಲ್ಲೂಕಿನ ಶ್ರೀರಾಂಪುರ ಗ್ರಾಮದಲ್ಲಿ ಬುಧವಾರ ಜಿಲ್ಲಾ, ತಾಲ್ಲೂಕು ಮಟ್ಟದ ತಂಬಾಕು ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ದಾಳಿ ನಡೆಸಿ, ದಂಡ ವಿಧಿಸಿದೆ. ಸಾರ್ವಜನಿಕರಿಗೆ ಮತ್ತು ಅಂಗಡಿ ಮಾಲೀಕರಿಗೆ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ, ಪಾನ್ ಮಸಾಲ, ತಂಬಾಕು ಜಗಿದು ಉಗಿಯದಂತೆ ಎಚ್ಚರಿಸಿ ಜಾಗೃತಿ ಮೂಡಿಸಲಾಯಿತು. ಸಂಬಂಧಪಟ್ಟ ಸೆಕ್ಷನ್-4, 6ಎ ಮತ್ತು 6ಬಿ ಬೋರ್ಡ್‌ಗಳನ್ನು ಹಾಕಲು ಸೂಚಿಸಲಾಯಿತು ಮತ್ತು ಸೆಕ್ಷನ್-4 ಅಡಿಯಲ್ಲಿ 22 ಕೇಸುಗಳನ್ನು ದಾಖಲಿಸಿ ರೂ. 2200 ದಂಡವನ್ನು, ಸೆಕ್ಷನ್-6ಎ ಅಡಿಯಲ್ಲಿ 05 ಕೇಸುಗಳನ್ನು ದಾಖಲಿಸಿ ರೂ. 500 ದಂಡವನ್ನು ಮತ್ತು ಸೆಕ್ಷನ್-6ಬಿ ಅಡಿಯಲ್ಲಿ 05 ಕೇಸುಗಳನ್ನು ದಾಖಲಿಸಿ ರೂ. 500 ದಂಡವನ್ನು ವಸೂಲಿ ಮಾಡಲಾಯಿತು. ತಂಬಾಕು ದಾಳಿಯಲ್ಲಿ ಜಿಲ್ಲಾ, ತಾಲ್ಲೂಕು ಮಟ್ಟದ ತನಿಖಾ ತಂಡದ ಅಧಿಕಾರಿಗಳಾದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎಂ.ಪ್ರಭುದೇವ, ಹೊಸದುರ್ಗ ಪೊಲೀಸ್ ಇಲಾಖೆ ಎಎಸ್‌ಐ ಮಹೇಶ್ವರಪ್ಪ, ಹೊಸದುರ್ಗ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿಯ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸಿದ್ದರಾಮಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಪರಮೇಶ್ವರಪ್ಪ, ಜಗದೀಶ, ಮಲ್ಲಿಕಾರ್ಜುನ ಇದ್ದರು.

## ಡಾ; ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ

**ದಾವಣಗೆರೆ:** ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಾವಣಗೆರೆ ಹಾಗೂ ಮದ್ಯಪಾನ ಸಂಯಮ ಮಂಡಳಿ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಆ.1 ರ ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮ.ನಿ.ಪ್ರ ಡಾ; ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಅಂಗವಾಗಿ ಆಚರಿಸುವ ವ್ಯಸನ ಮುಕ್ತ ದಿನಾಚರಣೆ ಕಾರ್ಯಕ್ರಮದಲ್ಲಿ ಡಾ; ಮಹಾಂತ ಶಿವಯೋಗಿಗಳ ಭಾವಚಿತ್ರಕ್ಕೆ ಪುಷ್ಪ ನಮನದ ಮೂಲಕ ಗೌರವ ಸಲ್ಲಿಸಲಾಯಿತು. ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿಯವರು ಪುಷ್ಪ ನಮನ ಸಲ್ಲಿಸಿದರು. ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಗ್ರಾಮ ಸ್ವರಾಜ್ ಅಭಿಯಾನದ ಅವರಗೆರೆ ರುದ್ರಮುನಿ, ಗ್ರಾಮ ಸೇವಾ ಸೇವಾಶ್ರಮ ಸಂಚಾಲಕರಾದ ಕಡ್ಲೆಬಾಳು ಪ್ರಕಾಶ್, ಕಸ್ತೂರಬಾಗಾಂಧಿ ಸಮಾಜದ ಮಹಿಳಾ ಸಂಚಾಲಕಿ ಉಷಾರಾಣಿ.ಆರ್, ಅಧಿಕಾರಿಗಳು ಉಪಸ್ಥಿತರಿದ್ದರು.



**ಪ್ರಮುಖ ಸುದ್ದಿ**

# ಚಿತ್ರದುರ್ಗ 8 ಕೆರೆಗೆ ನೀರು: ಶಾಸಕರಿಗೆ ಅಭಿನಂದನೆ

» ಚಿತ್ರದುರ್ಗ



ಭದ್ರಾ ಮೇಲ್ದಂಡೆ ಯೋಜನೆಯಲ್ಲಿ ಚಿತ್ರದುರ್ಗ ತಾಲ್ಲೂಕಿನ 8 ಕೆರೆಗಳಿಗೆ ನೀರನ್ನು ಹರಿಸಲು ಕಾರಣರಾದ ಚಿತ್ರದುರ್ಗ ಕ್ಷೇತ್ರದ ಶಾಸಕರಾದ ಕೆ.ಸಿ.ವಿರೇಂದ್ರರವರನ್ನು ಇಂದು ಆಯಾ ಗ್ರಾಮದವರು ಪ್ರವಾಸಿ ಮಂದಿರದಲ್ಲಿ ಭೇಟಿ ಮಾಡುವುದರ ಮೂಲಕ ಅಭಿನಂದಿಸಿದರು.

ಚಿತ್ರದುರ್ಗ ತಾಲ್ಲೂಕಿನ ಗೂಡಬನಹಾಳ್‌ನ ತಿಮ್ಮಣ್ಣ ನಾಯಕ ಕೆರೆ, ಹುಲ್ಲೂರು, ಮಾನಂಗಿ, ಕಾಟೇಹಳ್ಳಿ, ಸಿದ್ದಾಪುರ, ಮಠದ ಹಿಂದಿನ ಕರೆ, ಪಂಡರಹಳ್ಳಿ ಗೋಕಟ್ಟೆ, ಹಲಸಿನ ಕರೆ, ಸಿಂಗಾಪುರ ಗೊಲ್ಲರಹಟ್ಟಿಯ ಕರೆಗಳಿಗೆ ನೀರು ತರಬೇಕೆಂದು ಹಲವಾರು ವರ್ಷಗಳಿಂದ ಹೋರಾಟ ನಡೆಯುತ್ತಿತ್ತು. ಆದರೆ ಕಾರ್ಯ ಗತವಾಗಿರಲಿಲ್ಲ, ಈಗ ಶಾಸಕರಾದ ವಿರೇಂದ್ರರವರು ಸರ್ಕಾರದಲ್ಲಿನ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರನ್ನು ಬೇಟಿ ಮಾಡಿ ಬಾಗದಲ್ಲಿ ನೀರಿನ ಭವಣೆ ಹೆಚ್ಚಾಗಿದೆ ಈ ಕೆರೆಗಳಿಗೆ ನೀರನ್ನು ಉಣಿಸುವುದರ ಮೂಲಕ ಈ ಭಾಗದ ರೈತರಿಗೆ ಅನುಕೂಲವಾಗಲಿದೆ ಎಂದು ಸಚಿವರಿಗೆ ಮನವರಿಕೆ ಮಾಡಿದ್ದರ ಫಲವಾಗಿ ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತದಿಂದ ಇದರ ಬಗ್ಗೆ ಸರ್ವೇ ಮಾಡುವಂತೆ ಅಧೀಕೃತವಾಗಿ ಆದೇಶವನ್ನು ಚಿತ್ರದುರ್ಗದ ಭದ್ರಾ ಮೇಲ್ದಂಡೆ ಯೋಜನಾ ವಲಯದ ಮುಖ್ಯ ಇಂಜಿನಿಯರಿಗೆ ಸೂಚನೆ ನೀಡಲಾಗಿದೆ.

ಭದ್ರಾ ಮೇಲ್ದಂಡೆ ಯೋಜನೆಯಡಿ ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ ಕೈಬಿಟ್ಟ ಕೆರೆಗಳನ್ನು ತಂಬಿಸುವ ಕಾಮಗಾರಿಗೆ ಕನ್ಸಲೆನ್ಸ್‌ಯಿಂದ ಆರ್ಥಿಕವಾಗಿ ಮತ್ತು ತಾಂತ್ರಿಕವಾಗಿ ಕಾರ್ಯ ಸಾಧ್ಯವಾಗುವಂತೆ ವಿವರವಾದ ಫೀಲ್ಡ್ ಸರ್ವೇ ಮಾಡಿಸಿ ಕಾರ್ಯಾಸಾಧ್ಯತಾ ವರದಿಯನ್ನು ತಯಾರಿಸುವಸಲುವಾಗಿಸಮಾಲೋಚಕರ ಸೇವೆಯನ್ನು ಪಡೆಯಲು 22 ಲಕ್ಷ ರೂ. ಗಳನ್ನು ನೀಡಲಾಗಿದೆ.

ಈ ಸಂದರ್ಭದಲ್ಲಿ ಸರ್ಕಾರದ ಪಂಚ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಶಿವಣ್ಣ ಇದರ ಮುಂದಾಳತ್ವವನ್ನು ವಹಿಸಿದ್ದರು, ಈ ಸಮಯದಲ್ಲಿ ಶೇಖರಪ್ಪ, ಸಿಂಗಾಪುರ, ಗಂಗಾಧರ ತಿಪ್ಪೇಸ್ವಾಮಿ ಹುಲ್ಲೂರು, ರವಿಕುಮಾರ್, ರೇವಣ್ಣ ಗೂಡಬನಹಾಳ್, ಸಿದ್ದಲಿಂಗಪ್ಪ, ಧನಂಜಯ, ನಿರಂಜನ, ಮಹಾದೇವಪ್ಪ, ಚಂದ್ರಶೇಖರ್, ಸಂದೀಪ್, ರೇವಣ್ಣ ಸಿದ್ದಪ್ಪ, ಶಿವಕುಮಾರ್, ಮಲೇಶಪ್ಪ, ನಿರಂಜನ, ಚಿತ್ರಲಿಂಗಪ್ಪ, ಸಿದ್ದಲಿಂಗಪ್ಪ, ಕಾಂತರಾಜ್, ಹಾಲೇಶ್, ಲೋಕೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**


## ಸರ್ಕಾರಿ ಶಾಲೆಗಳಿಗೆ ಸರ್ಕಾರೇತರ ಸಂಘಗಳ ಸಹಕಾರ ಅಗತ್ಯ.



» ಪರಶುರಾಮಪುರ

ಸರ್ಕಾರಿ ಶಾಲೆಗಳಿಗೆ ಸರ್ಕಾರೇತರ ಸಂಘ ಸಂಸ್ಥೆಗಳು, ಸ್ಥಳೀಯ ಆಡಳಿತ ಹಾಗೂ ಸಮುದಾಯದ ಸಹಭಾಗಿತ್ವ ಅತೀ ಅಗತ್ಯ ಎಂದು ವಿಬ್ಯಾಕ್ ಅನಿಮಲ್ ಹೆಲ್ತ್ ಪ್ರೈಲಿ ವ್ಯವಸ್ಥಾಪಕ ಸುರೇಶ ಹೇಳಿದರು ಸಮೀಪದ ಪುರ್ಲೆಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಗುರುವಾರ ವಿಬ್ಯಾಕ್ ಅನಿಮಲ್ ಹೆಲ್ತ್ ಪ್ರೈವೇಟ್ ಲಿಮಿಟೆಡ್, ಪಶುಪಾಲನಾ ಇಲಾಖೆ, ಪುರ್ಲೆಹಳ್ಳಿ ಗ್ರಾಮದ ಪಶುಚಿಕಿತ್ಸಾಲಯದ ವತಿಯಿಂದ ಕಂಪನಿಯ ಸಿಎಸ್‌ಆರ್ ಪಂಡ್‌ನಲ್ಲಿ ಶುದ್ಧಕುಡಿವ ನೀರಿನ ಘಟಕ ನೀಡುವ ಕಾರ್ಯಕ್ರಮದಲ್ಲಿ ಮಾತನಾಡಿದರು ಸ್ಥಳೀಯ ಪಶುಚಿಕಿತ್ಸಾಲಯದ ಪಶುವೈದ್ಯಾಧಿಕಾರಿ, ಗ್ರಾಮದ ಸಮಾನ ಮನಸ್ಕರು ಸರ್ಕಾರಿ ಶಾಲೆಗೆ ಶುದ್ಧ ಕುಡಿವ ನೀರಿನ ಘಟಕ ನೀಡಬೇಕು ಎಂದು ಮನವಿ ಮಾಡಿದ ಹಿನ್ನೆಲೆ ಇಂದು ಶಾಲೆಯ ಮಕ್ಕಳು ಶುದ್ಧ ನೀರು ಕುಡಿಯಲೆಂದು ಲೋಕಾರ್ಪಣೆಗೊಳಿಸುತ್ತಿದ್ದೇವೆ ಎಂದರು ಗ್ರಾಮದ ಪಶುಚಿಕಿತ್ಸಾಲಯದ ಆಡಳಿತ ವೈದ್ಯಾಧಿಕಾರಿ ಡಾ ರಾಜಣ್ಣ ಮಾತನಾಡಿ ನಾವಿಂದು ಸರ್ಕಾರಿ ಶಾಲೆಗಳಲ್ಲಿ ಓದಿ ಉನ್ನತ ಹುದ್ದೆಗಳಲ್ಲಿದ್ದೇವೆ ನಾವು ಸರ್ಕಾರಿ ಶಾಲೆಗಳ ಸಮಗ್ರ ಅಭಿವೃದ್ಧಿಗೆ ಕೈಜೋಡಿಸಬೇಕೆಂಬ ಉದ್ದೇಶದಿಂದ ಸಂಘ ಸಂಸ್ಥೆಗಳ ನೆರವು ಪಡೆದುಕೊಂಡು ಗ್ರಾಮದ ಸರ್ಕಾರಿ ಶಾಲೆಗೆ ಅಗತ್ಯವಾಗಿ ಬೇಕಿದ್ದ ಶುದ್ಧನೀರಿನ ಘಟಕದ ಯಂತ್ರವನ್ನು ನೀಡಿದ್ದೇವೆ ಶಾಲಾ ಶಿಕ್ಷಕರು ಮಕ್ಕಳು ಶಾಲಾ ಸಮಿತಿಯವರು ಸದುಪಯೋಗಪಡಿಸಿಕೊಳ್ಳಬೇಕು ಎಂದರು ಇದೇ ವೇಳೆ ಶಾಲೆಯ ಮುಖ್ಯಶಿಕ್ಷಕರು ಮತ್ತು ಶಾಲಾ ಸಮಿತಿಯವರಿಗೆ ಶುದ್ಧ ನೀರಿನ ಘಟಕವನ್ನು ನೀಡಿ ಮಕ್ಕಳಿಗೆ ಉಪಯೋಗಿಸಲು ತಿಳಿಸಲಾಯಿತು ಸಂದರ್ಭದಲ್ಲಿ ಸಿಎನ್‌ಹಳ್ಳಿ ಗ್ರಾಪಂ ಅಧ್ಯಕ್ಷ ಆನಂದ್, ರಾಜಣ್ಣ, ವಿಬ್ಯಾಕ್ ಅನಿಮಲ್ ಹೆಲ್ತ್ ಪ್ರೈಲಿನ ಸುರೇಶ, ಸುಮನ್, ಶಾಲಾ ಸಮಿತಿಯ ಶ್ರೀಕಂಠಪ್ಪ, ಮುಖ್ಯಶಿಕ್ಷಕ ಚಂದ್ರಶೇಖರ, ಶಾಲಾ ಸಮಿತಿಯ ಪದಾಧಿಕಾರಿಗಳು ಶಾಲಾ ಸಿಬ್ಬಂದಿ ಗ್ರಾಮಸ್ಥರು ಇದ್ದರು.

## ಬಂಡೆಹಟ್ಟಿ ಸೋಲಬಂಡೆ ಕ್ವಾರಿಯಲ್ಲಿ ಬಿದ್ದು ನಾಗೇಂದ್ರಪ್ಪ ಸಾವು



» ಚಳ್ಳಕೆರೆ

ತಾಲ್ಲೂಕಿನ ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಂಡೆಹಟ್ಟಿ ಗ್ರಾಮದ ಸೋಮಲಬಂಡೆ ಕಲ್ಲಿನ ಕ್ವಾರೆಯಲ್ಲಿ ಕಾರ್ಯನಿರ್ವಹಿಸುವ ಸಂದರ್ಭದಲ್ಲಿ ಸೊಂಟಕ್ಕೆ ಹಗ್ಗ ಸಡಿಲಗೊಂಡು ಕೆಳಗೆ ಬಿದಿದ್ದು, ಗಾಯಗೊಂಡ ನಾಗೇಂದ್ರ(38) ಎಂಬ ವ್ಯಕ್ತಿಯನ್ನು ಚಿತ್ರದುರ್ಗದ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾನೆ. ಮೃತನ ಪತ್ನಿ ಪಿ.ಅನಿತಮ್ಮ ಈ ಬಗ್ಗೆ ಪೊಲೀಸರಿಗೆ ದೂರು ನೀಡಿದ್ದು, ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ಯುಡಿಆರ್ ಪ್ರಕರಣ ದಾಖಲಿಸಿದ್ದಾರೆ.

## ಇಂದು ವೇದಾವತಿಗೆ ಶಾಸಕರಿಂದ ಬಾಗಿನ ಅರ್ಪಣೆ

» ಹೊಸದುರ್ಗ

ಕಳೆದ ಸುಮಾರು ಒಂದು ತಿಂಗಳಿಂನಿಂದಲೂ ಸಹಾ ಸತತವಾಗಿ ಸುರಿದ ಮಳೆಗೆ ತಾಲೂಕಿನ ಜೀವನದಿ ಹಾಗು ಪಟ್ಟಣಕ್ಕೆ ನೀರೋದಗಿಸುವ ಜೀವಜಲವಾದ ತಾಲೂಕಿನ ಕೆಲ್ಲೋಡು ಸಮೀಪವಿರುವ ವೇದಾವತಿ ನದಿ ಭರ್ತಿಯಾಗಿರುವ ಹಿನ್ನೆಲೆಯಲ್ಲಿ ಆಗಸ್ಟ್ 2 ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ಶಾಸಕ ಬಿ.ಜಿ.ಗೋವಿಂದಪ್ಪನವರು ಬಾಗಿನ ಸಮರ್ಪಣೆ ಮಾಡಲಿದ್ದು ಈ ಕಾರ್ಯಕ್ರಮಕ್ಕೆ ಪುರಸಭಾ ಸದಸ್ಯರುಗಳು,ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಭಾಗವಹಿಸಬೇಕೆಂದು ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ.ತಿಳಿಸಿದ್ದಾರೆ.

# ಶಾಲಾ ಕಟ್ಟಡ ದುರಸ್ತಿ ತಿಂಗಳಲ್ಲಿ ಪೂರ್ಣಗೊಳಿಸಲು ಮಾಯಕೊಂಡ ಶಾಸಕರಾದ ಬಸವಂತಪ್ಪ ಸೂಚನೆ

» **ದಾವಣಗೆರೆ**

ಜಲಜೀವನ್ ಮಿಷನ್ ಯೋಜನೆಯಡಿ ಮುಕ್ತಾಯವಾಗಿರುವ ಕಾಮಗಾರಿಗಳಿಂದ ನೀರು ಸರಬರಾಜು ಮಾಡಲು ಮತ್ತು ಶಿಥಿಲಗೊಂಡಿರುವ ಅಂಗನವಾಡಿ ಹಾಗೂ ಶಾಲಾ ಕಟ್ಟಡ, ಶೌಚಾಲಯಗಳ ಕಾಮಗಾರಿಗಳನ್ನು ತಿಂಗಳಲ್ಲಿ ಪೂರ್ಣಗೊಳಿಸಿ ಜನರ ಬಳಕೆಗೆ ಮುಕ್ತವಾಗಿಸಬೇಕೆಂದು ಮಾಯಕೊಂಡ ಶಾಸಕರಾದ ಕೆ. ಎಸ್.ಬಸವಂತಪ್ಪ ಅಧಿಕಾರಿಗಳಿಗೆ ತಿಳಿಸಿದರು.

ಅವರು ಗುರುವಾರ ಜಿಲ್ಲಾ ಪಂಚಾಯತ್‌ನ ಎಸ್.ಎಸ್ ಮಲ್ಲಿಕಾರ್ಜುನ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿವಿಧ ಇಲಾಖೆಗಳಿಂದ ಕೈಗೊಳ್ಳಲಾಗಿರುವ ಕ್ಷೇತ್ರದ ಅಭಿವೃದ್ದಿ ಕಾಮಗಾರಿಗಳ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು. ಕ್ಷೇತ್ರದಲ್ಲಿ ವಿವಿಧ ಇಲಾಖೆಗಳಿಂದ ಅನುಷ್ಠಾನ ಮಾಡುತ್ತಿರುವ ಕಾಮಗಾರಿಗಳನ್ನು ಪೂರ್ಣಗೊಳಿಸದೇ ಬಾಕಿ ಉಳಿಸಿಕೊಳ್ಳಲಾಗಿದೆ, ಕುಡಿಯುವ ನೀರು, ಚರಂಡಿ, ಶಾಲಾ ಕಟ್ಟಡ, ರಸ್ತೆ, ಅಂಗನವಾಡಿ ಸೇರಿದಂತೆ ಗ್ರಾಮಗಳಿಗೆ ಅಗತ್ಯವಿರುವ ಕಾಮಗಾರಿಗಳಿದ್ದು ಈ ಎಲ್ಲಾ ಕಾಮಗಾರಿಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಿ ಜನರಿಗೆ ಅನುಕೂಲ ಮಾಡಿಕೊಡಬೇಕಾಗಿದೆ ಎಂದರು.




ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆ, ಮನೆ ಮನೆಗೆ ಕಲ್ಪಿಸಿರುವ ನಲ್ಲಿ ನೀರು ಸಂಪರ್ಕದ ಬಗ್ಗೆ ಗ್ರಾಮೀಣ ನೀರು ಪೂರೈಕೆ ವಿಭಾಗದ ಇಂಜಿನಿಯರ್‌ರಿಂದ ಮಾಹಿತಿ ಪಡೆದರು. ನರೇಗಾ ಯೋಜನೆಯಡಿ ಶಾಲೆಯಲ್ಲಿನ ಮಕ್ಕಳ ಭೋಜನಾಲಯ ಮತ್ತು ನೀರು ನಿರ್ವಹಣಾ ಕಾಮಗಾರಿಗಳನ್ನು ತೆಗೆದುಕೊಂಡು ಪೂರ್ಣಗೊಳಿಸಲು ಇಂಜಿನಿಯರ್‌ಗೆ ತಿಳಿಸಿದರು.

ಮನೆಗಳಿಗೆ ನಲ್ಲಿ ಅಳವಡಿಸುವಾಗ ಪ್ರತಿಯೊಂದು ಮನೆಗಳ ಸರ್ವೇ ಮಾಡಿ ನಲ್ಲಿ ಸಂಪರ್ಕ ಕಲ್ಪಿಸಬೇಕು. ನಲ್ಲಿ ಅಳವಡಿಸುವಾಗ ಗುಣಮಟ್ಟದ ಪೈಪ್ ಅಳವಡಿಸಬೇಕು ಮತ್ತು ಪೈಪ್‌ಲೈನ್ ಮಾಡಿದ ನಂತರ ಗುಂಡಿಯನ್ನು ಸರಿಯಾಗಿ ಮುಚ್ಚಿ ಕಾಂಕ್ರೀಟ್ ರಸ್ತೆಗಳಾಗಿದ್ದಲ್ಲಿ ಪುನಃ ಕಾಂಕ್ರೀಟ್ ಹಾಕಬೇಕು. ಕಳಪೆ ಕಾಮಗಾರಿ ಕೈಗೊಂಡಲ್ಲಿ ಸಂಬಂಧಿಸಿದ ಅಧಿಕಾರಿಗಳ ಮೇಲೆ ಮತ್ತು ಗುತ್ತಿಗೆದಾರರ ಮೇಲೆ ಕ್ರಮಕ್ಕೆ ಒತ್ತಾಯಿಸಲಾಗುತ್ತದೆ ಎಂದರು.

ಜೆಜೆಎಂ ಯೋಜನೆಯಡಿ ಮೊದಲ ಹಂತದ ಕಾಮಗಾರಿಯಲ್ಲಿ 14 , 2 ರಲ್ಲಿ 39, 3 ರಲ್ಲಿ 27, 4 ರಲ್ಲಿ 5 ಕಾಮಗಾರಿಗಳು ಮುಕ್ತಾಯಗೊಂಡಿವೆ ಎಂದು ಗ್ರಾಮೀಣ ಕುಡಿಯುವ ನೀರು ವಿಭಾಗದ ಇಂಜಿನಿಯರ್ ಸಭೆಗೆ ತಿಳಿಸಿದಾಗ ಬಾಕಿ ಇರುವ 46 ಕಾಮಗಾರಿಗಳನ್ನು ಒಂದೂವರೆ ತಿಂಗಳ ಅವಧಿಯಲ್ಲಿ ಮುಗಿಸಬೇಕೆಂದು ಶಾಸಕರು ತಿಳಿಸಿ ಕಾಮಗಾರಿಗಳ ಟೆಂಡರ್ ಆಗಿದ್ದರೂ ತ್ವರಿತವಾಗಿ ಪ್ರಾರಂಭಿಸುತ್ತಿಲ್ಲ ಏಕೆ ಎಂದು ಪ್ರಸ್ತಾಪಿಸಿ ಟೆಂಡರ್ ಮಾಡಿದ ಎಲ್ಲಾ ಕಾಮಗಾರಿಗಳನ್ನು ಪ್ರಾರಂಭಿಸುವ ಮುನ್ನ ನನ್ನ ಗಮನಕ್ಕೆ ತಂದು ತ್ವರಿತವಾಗಿ ಅನುಷ್ಠಾನ ಮಾಡಬೇಕೆಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ಮಾತನಾಡಿ ಗ್ರಾಮ ಪಂಚಾಯತಿಗಳಲ್ಲಿ ಎಷ್ಟು ಖಾತೆಗಳಿವೆ ಎಂಬುದನ್ನು ಪರಿಶೀಲಿಸಿ ಬ್ಯಾಂಕ್ ಬ್ಯಾಲೆನ್ಸ್ ಪರಿಶೀಲಿಸಿಕೊಳ್ಳಬೇಕು. ಬ್ಯಾಂಕ್ ಖಾತೆಯಲ್ಲಿನ ಹಣವನ್ನು ದುರುಪಯೋಗ ಮಾಡಿಕೊಳ್ಳುವ ಸಾಧ್ಯತೆ ಇರುವುದರಿಂದ ಪರಿಶೀಲನೆ ಮಾಡಿಕೊಳ್ಳಲು ತಿಳಿಸಿದರು.

ಸಭೆಯಲ್ಲಿ ಉಪಕಾರ್ಯದರ್ಶೀ ಕೃಷ್ಣನಾಯ್ಕ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಡಾ.ಸದಾಶಿವ ವರದಿ ಜಾರಿಗೆ ಸುಪ್ರೀಂ ಹಸಿರು ನಿಶಾನೆ: ಸೂರನಹಳ್ಳಿ ಶ್ರೀನಿವಾಸ್

» **ಚಳ್ಳಕೆರೆ**

ರಾಜ್ಯದ ಸರ್ವೋಚ್ಚ ನ್ಯಾಯಾಲಯ ಡಾ.ಸದಾಶಿವ ಆಯೋಗದ ಒಳಮೀಸಲಾತಿ ವರದಿಯನ್ನು ಜಾರಿಗೊಳಿಸುವಂತೆ ಕೇಂದ್ರ ಸರ್ಕಾರಕ್ಕೆ ಸೂಚನೆ ನೀಡುವ ಮೂಲಕ ದಲಿತ ಸಮುದಾಯದ ಬದುಕಿಗೆ ಹೊಸ ಆತ್ಮವಿಶ್ವಾಸವನ್ನು ಉಂಟು ಮಾಡಿದೆ ಎಂದು ಜಿಲ್ಲಾ ಮಾದಿಗ ಮಹಾಸಭಾದ ಜಿಲ್ಲಾಧ್ಯಕ್ಷ ಎಂ.ಶಿವಮೂರ್ತಿ ಹೇಳಿದರು.

ಸರ್ವೋಚ್ಚ ನ್ಯಾಯಾಲಯ ಗುರುವಾರ ಈ ಬಗ್ಗೆ ತೀರ್ಪು ನೀಡಿದ ಹಿನ್ನೆಲೆಯಲ್ಲಿ ತೀರ್ಪನ್ನು ಹೆಚ್ಚು ಸಂತೋಷದಿಂದ ಎಂದ ಅವರು, ಮುಂಬರುವ ದಿನಗಳಲ್ಲಿ ಸರ್ಕಾರಿ ನೌಕರಿ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ದಲಿತ ಸಮುದಾಯದ ಒಳಮೀಸಲಾತಿ ನೀಡಿದ ಫಲವಾಗಿ ಈ ಸಮುದಾಯದ ಶೋಷಣೆ ಮುಕ್ತ ಸಮುದಾಯದವಾಗಲಿದೆ ಎಂದು ಅಭಿಪ್ರಾಯಪಟ್ಟರು. ನಾಡಿನ ಮಾದಿಗ ಸಮುದಾಯಕ್ಕೆ ಈ ತೀರ್ಪು ವರವಾಗಿ ಪರಿಣಮಿಸಲಿದೆ. ಕಾರಣ, ನಿರಂತರ ಹೋರಾಟದಿಂದ ಸಮುದಾಯ ಬಳಲಿಬೆಂಡಾಗಿದ್ದು, ಶೋಷಿತರ ಪಾಲಿಗೆ ಮೀಸಲಾತಿ ಕನಸಾಗಿತ್ತು. ಆದರೆ, ಅಂತಿಮವಾಗಿ ಪ್ರಾಮಾಣಿಕ ಹೋರಾಟಕ್ಕೆ ಸುಪ್ರೀಂಕೋರ್ಟ್ ಜಯವನ್ನು ನೀಡಿದೆ. ದಲಿತರ ಬಾಳಿನಲ್ಲಿ ಮುಂದಿನ ದಿನಗಳಲ್ಲಿ ಅಭಿವೃದ್ಧಿ ಪರ್ವ ಆರಂಭವಾಗಲಿದೆ. ಒಳಮೀಸಲಾತಿ ಸಮುದಾಯಕ್ಕೆ ವರವಾಗಿ ಪರಿಣಮಿಸಲಿದೆ ಎಂದರು.



ಸಾಮಾಜಿಕ ಹೋರಾಟಗಾರ ಎಚ್. ಎಸ್.ಸೈಯದ್ ಮಾತನಾಡಿ, ಹಲವಾರು ವರ್ಷಗಳ ಹೋರಾಟದಿಂದ ನಾಡಿನ ಎಲ್ಲಾ ದಲಿತ ಸಮುದಾಯದ ಬಂಧುಗಳು ಮೀಸಲಾತಿ ಸೌಲಭ್ಯವಿಲ್ಲದೆ ನೋವು ಅನುಭವಿಸುತ್ತಿದ್ದರು. ಪ್ರಸ್ತುತ ಜಾರಿಯಲ್ಲಿದ್ದ ಮೀಸಲಾತಿ ಪ್ರಮಾಣ ದಲಿತರ ಬೆಳವಣಿಗೆಗೆ ನಿರೀಕ್ಷಿತ ಮಟ್ಟದಲ್ಲಿ ಸಹಾಯವಾಗಿರಲಿಲ್ಲ. ಆದರೆ, ಇಂದು ಸುಪ್ರೀಂ ಕೋರ್ಟ್ ಒಳಮೀಸಲಾತಿ ಕಲ್ಪಿಸುವ ಮೂಲಕ ಚರಿತ್ರಾಹ ತೀರ್ಪು ನೀಡಿದೆ ಎಂದರು.

ದಲಿತ ಮುಖಂಡರಾದ ಬಿಜೆಪಿ ಮಂಡಲಾಧ್ಯಕ್ಷ ಸೂರನಹಳ್ಳಿ ಶ್ರೀನಿವಾಸ್, ಆರ್.ಡಿ.ಮಂಜುನಾಥ, ಎಚ್.ಲಂಕಪ್ಪ, ಮಾರುತಿ, ಕಾಂತರಾಜ್, ಬಂಡೆರಂಗಪ್ಪ, ಭೀಮಣ್ಣ, ಚನ್ನಗಾನಹಳ್ಳಿಮಲ್ಲೇಶ್, ನಾಗರಾಜು ಮುಂತಾದವರು ಉಪಸ್ಥಿತರಿದ್ದರು.

## ಕರ್ನಾಟಕ ಭೂ ಕಬಳಿಕೆ ನಿಷೇಧ ಅಧಿನಿಯಮ ಕುರಿತು ಕಾರ್ಯಾಗಾರ

» **ದಾವಣಗೆರೆ**

ಕರ್ನಾಟಕ ಭೂಕಬಳಿಕೆ ನಿಷೇಧ ನ್ಯಾಯಾಲಯಗಳು ಬೆಂಗಳೂರು, ಕಂದಾಯ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾಡಳಿತ ದಾವಣಗೆರೆ ಇವರ ಸಹಯೋಗದಲ್ಲಿ ಆಗಸ್ಟ್ 3 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕರ್ನಾಟಕ ಭೂ ಕಬಳಿಕೆ ನಿಷೇಧ ಅಧಿನಿಯಮ ಮತ್ತು ಸಂಬಂಧಿಸಿದ ಕಾಯ್ದೆಗಳ ಬಗ್ಗೆ ಒಂದು ದಿನದ ಕಾರ್ಯಗಾರ ಏರ್ಪಡಿಸಲಾಗಿದೆ. ಕರ್ನಾಟಕ ಭೂಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದ ಅಧ್ಯಕ್ಷರಾದ ನ್ಯಾಯಮೂರ್ತಿ ಬಿ.ಎ.ಪಾಟೀಲ್ ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾಧಿಕಾರಿ ಡಾ.ಗಂಗಾಧರಸ್ವಾಮಿ.ಜಿ.ಎಂ ಅಧ್ಯಕ್ಷತೆ ವಹಿಸುವರು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ ಎನ್.ಹೆಗಡೆ, ಜಿ.ಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ವಿಶೇಷ ಆಹ್ವಾನಿತರಾಗಿ ಭಾಗವಹಿಸುವರು. ಪ್ರಥಮ ಅಧಿವೇಶನ ಬೆಳಿಗ್ಗೆ 10.30 ರಿಂದ 11.30 ರವರೆಗೆ, ಕರ್ನಾಟಕ ಭೂಕಬಳಿಕೆ ನಿಷೇಧ ನ್ಯಾಯಾಲಯದ ಅಧ್ಯಕ್ಷರಾದ ನ್ಯಾಯಮೂರ್ತಿ ಬಿ.ಎ.ಪಾಟೀಲ್ ಅವರು ಕರ್ನಾಟಕ ಭೂ ಕಬಳಿಕೆ ನಿಷೇಧ ಅಧಿನಿಯಮ 2011 ಮತ್ತು ತಿದ್ದುಪಡಿ ಕಾಯ್ದೆಯ ಕುರಿತು ಮೊದಲನೇ ಭಾಗದ ಉಪನ್ಯಾಸ ನೀಡುವರು. ಭೂದಾಖಲೆಗಳ ಉಪನಿರ್ದೇಶಕರಾದ ಭಾವನ ಬಸವರಾಜು ಇವರು ಮೋಜಿಣಿ ಮತ್ತು ನಿಯಮಗಳು ಎರಡನೇ ಭಾಗದ ಉಪನ್ಯಾಸ ನೀಡುವರು. ಕರ್ನಾಟಕ ಭೂಕಬಳಿಕೆ ನಿಷೇಧ ನ್ಯಾಯಾಲಯದ ನ್ಯಾಯಿಕ ಸದಸ್ಯರಾದ ಪಾಟೀಲ ನಾಗಲಿಂಗನಗೌಡ ಪ್ರಥಮ ಅಧಿವೇಶನದ ಅಧ್ಯಕ್ಷತೆ ವಹಿಸುವರು. ಉಪವಿಭಾಗಾಧಿಕಾರಿ ಸಂತೋಷ್ ಕುಮಾರ್ ಉಪಸ್ಥಿತರಿರುವರು. ದ್ವಿತೀಯ ಅಧಿವೇಶನ ಬೆಳಿಗ್ಗೆ 11.50 ರಿಂದ 1 ಗಂಟೆಯವರೆಗೆ ಕರ್ನಾಟಕ ಭೂಕಬಳಿಕೆ ನಿಷೇಧ ನ್ಯಾಯಾಲಯದ ಕಂದಾಯ ಸದಸ್ಯರಾದ ಎಸ್.ಪಾಲಯ್ಯ ಅವರು ಕರ್ನಾಟಕ ಭೂಕಂದಾಯ ಅಧಿನಿಯಮ ಕಲಂ192(ಎ) ಕುರಿತು ಮೊದಲನೇ ಭಾಗದ ಉಪನ್ಯಾಸ ನೀಡುವರು. ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಡಾ.ಎನ್ ಮಹಾಂತೇಶ್ ಅವರು ಮುನಿಸಿಪಲ್ ಕಾರ್ಪೋರೇಷನ್ ಆಸ್ತಿಗಳ ಒತ್ತುವರಿ ಮತ್ತು ತೆರವುಗೊಳಿಸಲು ಇರುವ ಕಾನೂನು ಪ್ರಕ್ರಿಯೆಗಳ ಕುರಿತು ಎರಡನೇ ಭಾಗದ ಉಪನ್ಯಾಸ ನೀಡುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ.ಮ.ಕರೆಣ್ಣವರ ಕೆರೆ ಒತ್ತುವರಿ ಮತ್ತು ತೆರವುಗೊಳಿಸಲು ಇರುವ ಕಾನೂನು ಪ್ರಕ್ರಿಯೆಗಳ ಕುರಿತು ಮೂರನೇ ಭಾಗದ ಉಪನ್ಯಾಸ ನೀಡುವರು. ಕರ್ನಾಟಕ ಭೂಕಬಳಿಕೆ ನಿಷೇಧ ನ್ಯಾಯಾಲಯದ ಅಧ್ಯಕ್ಷರಾದ ನ್ಯಾಯಮೂರ್ತಿ ಬಿ.ಎ ಪಾಟೀಲ್ ದ್ವಿತೀಯ ಅಧಿವೇಶನದ ಅಧ್ಯಕ್ಷತೆ ವಹಿಸುವರು. ಪಾಲಿಕೆ ಆಯುಕ್ತರಾದ ರೇಣುಕಾ, ದಾ-ಹ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಹುಲ್ಮನಿ ತಿಮ್ಮಣ್ಣ ಉಪಸ್ಥಿತರಿರುವರು. ತೃತೀಯ ಅಧಿವೇಶನ ಮಧ್ಯಾಹ್ನ 2 ರಿಂದ 3.15 ರವರೆಗೆ ನಿವೃತ್ತ ಅಪರ ಪ್ರಧಾನ ಮುಖ್ಯ ಅರಣ್ಯಸಂರಕ್ಷಣಾಧಿಕಾರಿ ಎ.ಎಂ.ಅಣ್ಣಯ್ಯ ಅವರು ಅರಣ್ಯ ಇಲಾಖೆಯ ಆಸ್ತಿಗಳ ಒತ್ತುವರಿ ಮತ್ತು ತೆರವುಗೊಳಿಸಲು ಇರುವ ಕಾನೂನು ಪ್ರಕ್ರಿಯೆಗಳ ಕುರಿತು ಮೊದಲನೇ ಭಾಗದ ಉಪನ್ಯಾಸ ನೀಡುವರು.

# ಪ್ರಮುಖ ದಾಖಲಾತಿ ಪಂಚಾಯಿತಿ ಕೇಂದ್ರದಲ್ಲೇ ವಿತರಣೆ ಸಂತಸತಂದಿದೆ: ಅಧ್ಯಕ್ಷೆ ಮಂಗಳಮ್ಮ

» **ಚಳ್ಳಕೆರೆ**

ತಾಲ್ಲೂಕು ಮಟ್ಟದ ಸರ್ಕಾರಿ ಕಚೇರಿಗಳಲ್ಲಿ ಸಿಗುವ ದಾಖಲಾತಿಗಳು ಗ್ರಾಮ ಪಂಚಾಯಿತಿ ಕಚೇರಿಯಲ್ಲೇ ದೊರೆತರೆ ಸಾರ್ವಜನಿಕರಿಗೆ ಅನಗತ್ಯ ತೊಂದರೆ ತಪ್ಪಿ ಅವರು ಸಹ ಸಮದಾನಕರ ಬದುಕನ್ನು ಬಾಳಲು ಸಾಧ್ಯವಾಗುತ್ತದೆ. ಸರ್ಕಾರ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಜನನ, ಮರಣ ದಾಖಲಾತಿ ಪತ್ರ ನೀಡುವ ಕಾನೂನು ಜಾರಿಗೆ ತಂದಿದ್ದು, ಗ್ರಾಮೀಣ ಭಾಗದ ಜನರಿಗೆ ಹೆಚ್ಚು ಸಹಾಯಕವಾಗಲಿದೆ ಎಂದು ನಗರಂಗೆರೆ ಗ್ರಾಮ ಪಂಚಾಯಿತಿ ನೂತನ ಅಧ್ಯಕ್ಷೆ ಮಂಗಳಮ್ಮರಂಗಸ್ವಾಮಿ ತಿಳಿಸಿದರು.

ಅವರು, ಗ್ರಾಮದ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಮೊದಲ ಬಾರಿಗೆ ಜನನ, ಮರಣ ಪ್ರಮಾಣ ಪತ್ರವನ್ನು ವಿತರಿಸಿ ಮಾತನಾಡಿದರು. ಗ್ರಾಮ ಪಂಚಾಯಿತಿ ಕೇಂದ್ರದಲ್ಲಿ ಕಂದಾಯ ಇಲಾಖೆಯ ದಾಖಲಾತಿಗಳು ಸಹ ದೊರೆಯುವಂತಾಗಬೇಕು. ಈ ನಿಟ್ಟಿನಲ್ಲಿ ಸರ್ಕಾರ ಹೆಚ್ಚು ಗಮನಹರಿಸಬೇಕು ಎಂದರು.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎಂ.ರಾಮಚಂದ್ರಪ್ಪ ಮಾತನಾಡಿ, ಪಂಚಾಯಿತಿ ಕೇಂದ್ರದಲ್ಲೇ ಜನನ, ಮರಣ ಪತ್ರ ವಿತರಣೆಯಿಂದ ಸಾರ್ವಜನಿಕರಿಗೆ ಸಮಯದ ಜೊತೆಗೆ ಅನಗತ್ಯ ವೆಚ್ಚವೂ ಸಹ ಕಡಿಮೆಯಾಗಲಿದೆ. ಲಕ್ಷ್ಮಿಪುರದ ಪೋಲಪ್ಪ ಎಂಬ ವ್ಯಕ್ತಿ ಮೃತಪಟ್ಟಿದ್ದು ಅವರ ಮರಣ ಪ್ರಮಾಣ ಪತ್ರವನ್ನು ಅವರ ಬಂಧುಗಳಿಗೆ ನೀಡಲಾಗಿದೆ. ಸರ್ಕಾರಿ ರಜೆಗಳನ್ನು ಹೊರತು ಪಡಿಸಿ ಕರ್ತವ್ಯದ ದಿನಗಳಲ್ಲಿ ಜನನ ಪತ್ರ ನೀಡಲಾಗುವುದು.

## ಫಾಸ್ಟ್ ನ್ಯೂಸ್

### ಸಾಮಾಜಿಕ ನ್ಯಾಯಕ್ಕೆ ಸಿಕ್ಕ ಅಭೂತಪೂರ್ವ ಗೆಲುವು

» **ಚಿತ್ರದುರ್ಗ**

ಆಂತರಿಕ ಮೀಸಲಾತಿಯನ್ನು ಎತ್ತಿ ಹಿಡಿಯುವ ಮೂಲಕ ಸುಪ್ರೀಂಕೋರ್ಟ್ ಏಳು ಸದಸ್ಯರ



ಪೀಠ ನೀಡಿರುವ ತೀರ್ಪು ಸಾಮಾಜಿಕ ನ್ಯಾಯಕ್ಕೆ ಸಿಕ್ಕ ಅಭೂತಪೂರ್ವ ಗೆಲುವು ಎಂದು ಚಿತ್ರದುರ್ಗ ಸಂಸದ ಗೋವಿಂದ ಕಾರಜೋಳ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಸುಪ್ರೀಂಕೋರ್ಟ್ ಐತಿಹಾಸಿಕ ತೀರ್ಪು ಸಾಮಾಜಿಕ ನ್ಯಾಯಕ್ಕೆ ನವ ಶಕ್ತಿ ಹಾಗೂ ಭಾರತೀಯ ಸಂವಿಧಾನದ ಆಶಯಕ್ಕೆ ಇನ್ನಷ್ಟೂ ಬಲ ನೀಡಿದಂತಾಗಿದೆ.ಸುಪ್ರೀಂ ಕೋರ್ಟ್‌ನ ಏಳು ನ್ಯಾಯಾಧೀಶರ ಪೀಠವು ಚಿನ್ನಯ್ಯ ತೀರ್ಪನ್ನು ರದ್ದುಗೊಳಿಸಿದ್ದು, ದೇವೀಂದ್ರ ಸಿಂಗ್ ಪ್ರಕರಣದ ತೀರ್ಪನ್ನು ಎತ್ತಿಹಿಡಿದಿದೆ. ಅಂದರೆ, ಭಾರತದ ಸಂವಿಧಾನವು ಎಸ್‌ಸಿಗಳಲ್ಲಿ ಆಂತರಿಕ ಮೀಸಲಾತಿಯನ್ನು ಅನುಮತಿಸುತ್ತದೆ ಎಂದು ಸುಪ್ರೀಂ ಕೋರ್ಟ್ ತೀರ್ಪು ಪ್ರಕಟಿಸಿರುವುದು ನಿಜಕ್ಕೂ ಹೆಮ್ಮೆ ಪಡುವ ಸಂಗತಿ.ಪರಿಶಿಷ್ಟ ಜಾತಿಗಳಲ್ಲಿ ಒಳಮೀಸಲಾತಿ ಸಮರ್ಥನೀಯ ಎಂದು ಒಳಮೀಸಲಾತಿಪರ ತೀರ್ಪು ಪ್ರಕಟಿಸಿದ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಿಂದಾಗಿ 30 ವರ್ಷಗಳ ನಿರಂತರ ಹೋರಾಟಕ್ಕೆ ಜಯ ದೊರಕಿದೆ. ಈ ಕಾರ್ಯಕ್ಕೆ ಹೋರಾಟ ಕೈಗೊಂಡ ಪ್ರತಿಯೊಬ್ಬ ಹೋರಾಟಗಾರರನ್ನು ನಾನು ಈ ಸಂದರ್ಭದಲ್ಲಿ ನೆನೆಯುತ್ತೇನೆ ಎಂದು ಸಂಸದರಾದ ಗೋವಿಂದ ಕಾರಜೋಳ ಹೇಳಿದ್ದಾರೆ.

### ಪ್ರತಿಭಾ ಪುರಸ್ಕಾರ

» **ಚಿತ್ರದುರ್ಗ**

ರೆಡ್ಡಿ ಜನ ಸಂಘದವತಿಯಿಂದ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಮಾಜಿ ಸೈನಿಕರಿಗೆ ಹಾಗೂ ನಿವೃತ್ತ ಅಧಿಕಾರಿಗಳು, ನೌಕರರಿಗೆ ಅಭಿನಂದನಾ ಸಮಾರಂಭವು ಆ.3ರ ಶನಿವಾರ ಮಧ್ಯಾಹ್ನ 12ಕ್ಕೆ ನಗರದ ಕಮ್ಮರೆಡ್ಡಿ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ರೆಡ್ಡಿ ಜನ ಸಂಘದ ಕಾರ್ಯದರ್ಶಿ ಜೆ.ಪರಶುರಾಮ್, ಶ್ರೀಮತಿ ಡಿ.ಕೆ.ಶೀಲಾ ತಿಳಿಸಿದ್ದಾರೆ. 2023-24ನೇ ಸಾಲಿನಲ್ಲಿ ಶೇ.85ಕ್ಕಿಂತ ಮೇಲ್ಪಟ್ಟ ಫಲಿತಾಂಶವನ್ನು ಪಡೆದ ಎಸ್.ಎಸ್.ಎಲ್.ಸಿ., ದ್ವಿತೀಯ ಪಿ.ಯು.ಸಿ.ಯ ರೆಡ್ಡಿ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ದೇಶ ಸೇವೆಯ ಕರ್ತವ್ಯದಲ್ಲಿ ತೊಡಗಿಸಿಕೊಂಡು ಸಾರ್ಥಕ ಸೇವೆಯನ್ನು ಸಲ್ಲಿಸಿ ನಿವೃತ್ತರಾದ ಸಮುದಾಯದ ಮಾಜಿ ಸೈನಿಕರಿಗೆ ಹಾಗೂ 01.04.2023 ರಿಂದ 31.07.2024ರವರೆಗೆ ಸರ್ಕಾರಿ ಸೇವೆ ಸಲ್ಲಿಸಿ ನಿವೃತ್ತರಾದ ಮತ್ತು ರಾಷ್ಟ್ರ ಮಟ್ಟದ ವಿಶೇಷ ಪ್ರಶಸ್ತಿಗೆ ಭಾಜನರಾದ ಸಮುದಾಯದ ಅಧಿಕಾರಿಗಳು ಮತ್ತು ನೌಕರರಿಗೆ ಅಭಿನಂದನಾ ಸಮಾರಂಭ ನಡೆಯಲಿದೆ ಎಂದು ತಿಳಿಸಿದ್ದಾರೆ. ಈ ಸಮಾರಂಭದ ಅಧ್ಯಕ್ಷತೆಯನ್ನು ಜಿಲ್ಲಾ ರೆಡ್ಡಿ ಜನ ಸಂಘದ ಅಧ್ಯಕ್ಷರು, ಮಾಜಿ ಶಾಸಕರಾದ ಜಿ.ಹೆಚ್.ತಿಪ್ಪಾರೆಡ್ಡಿ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಸಂಘದ ಉಪಾಧ್ಯಕ್ಷರಾದ ಎಂ.ಕೆ.ಅನಂತರೆಡ್ಡಿ, ಖಂಜಾಚಿ ಜಿ.ವೈ.ಸುರೇಶ್ ಕುಮಾರ್ ಸೇರಿದಂತೆ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ.

### ಕನ್ನಡ ಕುವರಿ ಜಿಲ್ಲಾ ಪ್ರಶಸ್ತಿ ಪ್ರಧಾನ



» **ಚಿತ್ರದುರ್ಗ**

ಕಲಾ ಕುಂಚ ಸಾಂಸ್ಕೃತಿಕ ಸಂಸ್ಥೆ ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಕನ್ನಡ ಕುವರಿ ಜಿಲ್ಲಾ ಪ್ರಶಸ್ತಿ ಪ್ರಧಾನ ಹಾಗೂ ಸರಸ್ವತಿ ಪುರಸ್ಕಾರ ರಾಜ್ಯ ಪ್ರಶಸ್ತಿ ಪ್ರಧಾನ ಸಮಾರಂಭವು ಇತ್ತೀಚೆಗೆ ದಾವಣಗೆರೆಯಲ್ಲಿ ಶಾಮನೂರು ಶಿವಶಂಕರಪ್ಪ ಸಮುದಾಯ ಭವನದಲ್ಲಿ ನಡೆದ ಸಮಾರಂಭದಲ್ಲಿ ಚಿತ್ರದುರ್ಗದ ಸದಾಶಿವನಗರದ ಬಿ.ವಿ. ವಿರಾಜಕುಮಾರ್ ಹಾಗೂ ಬಿ.ವಿ. ಶಿವಲೀಲಾ ಇವರ ಮಗಳಾದ, ಕುಮಾರಿ ಸಮೃದ್ಧಿ ಬಿವಿ,ಇವಳಿಗೆ ಕನ್ನಡದಲ್ಲಿ ಅತಿ ಹೆಚ್ಚು ಅಂಕ ಪಡೆದಿದ್ದಕ್ಕಾಗಿ "ಕನ್ನಡ ಕುವರಿ" ಜಿಲ್ಲಾ ಪ್ರಶಸ್ತಿ ಹಾಗೂ ಎಸ್.ಎಸ್.ಎಲ್.ಸಿ.ಯಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದಿದ್ದಕ್ಕಾಗಿ "ಸರಸ್ವತಿ ಪುರಸ್ಕಾರ" ರಾಜ್ಯಪ್ರಶಸ್ತಿಗಳನ್ನು ನೀಡಿ ಸನ್ಮಾನಿಸಲಾಯಿತು. ಈ ಸಮಾರಂಭದಲ್ಲಿ ಕಲಾ ಕುಂಚ ಸಾಂಸ್ಕೃತಿಕ ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶನ ಶಣೈ ಮಹಿಳಾ ಸಂಸ್ಥಾಪಕರಾದ ಶ್ರೀಮತಿ ಜ್ಯೋತಿ ಗಣೇಶ ಶೆಣೈ ನಾಗಲೇಖ ಸಾಹಿತಿಗಳು ಜನ ಸಿರಿ ಫೌಂಡೇಶನ್‌ನ ಸಂಸ್ಥಾಪಕರಾದ ನಾಗಲೇಖ ಹಿರಿಯ ಸಾಹಿತಿ ಶ್ರೀಮತಿ ಜಯಲಕ್ಷ್ಮಿ ರಾಮಚಂದ್ರ ಹೊಳ್ಳ ಕೇರಳ ರಾಜ್ಯದ ಕಲಾ ಕುಂಚ ಅಧ್ಯಕ್ಷರಾದ ಶ್ರೀಮತಿ ಜಯಲಕ್ಷ್ಮಿ ಕಾರಂತ್ ಉಪಸ್ಥಿತರಿದ್ದರು

**ಪ್ರಮುಖ ಸುದ್ದಿ**

# ಯುವಪೀಳಿಗೆಗೆ ವಚನಗಳ ಮಹತ್ವದ ಬಗ್ಗೆ ಅರಿವು ಮೂಡಿಸಬೇಕು

» **ಹೊಸದುರ್ಗ**

ಅಡಪದ ಅಪ್ಪಣ್ಣನವರು 250 ವಚನಗಳನ್ನು ಬರೆದಿದ್ದರು.ಅವರ ಧರ್ಮ ಪತ್ನಿಯಾದ ಲಿಂಗಮ್ಮನವರು 144 ವಚನಗಳನ್ನ ಬೆರೆದಿದ್ದರು. ಅಪ್ಪಣ್ಣನವರ ವಚನಗಳನ್ನ ಮತ್ತು ಪತ್ನಿ ಲಿಂಗಮ್ಮನ ವಚನಗಳನ್ನ ಕೇಳುತ್ತಾ ಹೋದರೆ ಮತ್ತೆ ಮತ್ತೆ ಕೇಳುತ್ತಾ ಹೋಗಬೇಕು ಎನಿಸುತ್ತದೆ. ಇಂದಿನ ಯುವಪೀಳಿಗೆಗೆ ವಚನಗಳು ಮತ್ತು ಮಚನಗಳ ಮಹತ್ವದ ಬಗ್ಗೆ ಗೊತ್ತಿಲ್ಲಾ ಅವರಿಗೆ ಅರಿವು ಮೂಡಿಸುವ ಕೆಲಸವಾಗಬೇಕಾಗಿದೆ ಎಂದು ಶ್ರೀ ವಾಣಿವಿಲಾಸ ಪ್ರೌಢಶಾಲೆಯ ಕಾರ್ಯದರ್ಶಿ ಶ್ರೀಮತಿಗೀತಾಸಿಂಗ್ ಕರೆ ನೀಡಿದರು.

ಪಟ್ಟಣದ ಕನ್ನಡ ಸಾಹಿತ್ಯ ಪರಿಷತ್ತಿನ ಕನ್ನಡ ಭವನದಲ್ಲಿ ಆಯೋಜಿಸಲಾಗಿದ್ದ ಅಡಪದ ಅಪ್ಪಣ್ಣನವರ ಜಯಂತಿ ಮಹೋತ್ಸವ ಕಾರ್ಯಕ್ರಮದಲ್ಲಿ ಅಡಪದ ಅಪ್ಪಣ್ಣನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ನಂತರ ಮಾತನಾಡಿದರು.




ಇಂದಿನ ಸಾಕಷ್ಟು ಯುವ ಸಮೂಹ ಕೇವಲ ಟಿ.ವಿ, ಮೊಬೈಲ್. ಇಂಟರ್‌ನೆಟ್, ಫೇಸ್‌ಬುಕ್, ವಾಟ್ಸಫ್ ಇನ್ನು ಅನೇಕ ಜಾಲತಾಣಗಳಲ್ಲಿ ಮುಳುಗಿಬಿಟ್ಟಿದ್ದಾರೆ ಅದರಿಂದ ಹೊರಬರುವುದೇ ತುಂಭ ಕಷ್ಟವಾಗಿಬಿಟ್ಟಿದೆ.

ಇಂತಹ ಕಾರ್ಯಕ್ರಮಗಳಲ್ಲಿ ಯುವ ಪೀಳಿಗೆಯ ಸಮೂಹವನ್ನ ಒಟ್ಟಿಗೂಡಿಸ ವಚನಗಳ ಬಗ್ಗೆ ಒಂದಿಷ್ಟು ಅರಿವು ಮೂಡಿಸುವ ಕೆಲಸವಾಗಬೇಕಿದೆ ಇಲ್ಲದಿದ್ದರೆ ಮುಂದಿನ ಪೀಳಿಗೆಗೆ ವಚನಗಳ ಬಗ್ಗೆ 12 ನೇ ಶತಮಾನದ ಶಿವಶರಣರ ಬಗ್ಗೆ ಅವರ ಆದರ್ಶ ಜೀವನಗಳ ಬಗ್ಗೆ ಅರಿವೇ ಇಲ್ಲದಂತಾಗುತ್ತದೆ ಎಂಬ ವಿಷಾದ ವ್ಯಕ್ತಪಡಿಸಿದ ಅವರು 12 ನೇ ಶರಣರ ಯುಗದಲ್ಲಿ ಪತಿ ಪತ್ನಿಯರಲ್ಲಿದ್ದ ಹೊಂದಾಣಿಕೆ ಅನ್ಯೂನ್ಯತೆ ಇಂದಿನ ದಿನಮಾನಗಳಲ್ಲಿ ಕಂಡು ಬರುತ್ತಿಲ್ಲ ಎಂದರು.ಅಧ್ಯಕ್ಷತೆ ವಹಿಸಿ ಮಾತನಾಡಿದ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಿ.ಪಿ.ಓಂಕಾರಪ್ಪ ಅಡಪದ ಅಪ್ಪಣ್ಣವರು 12 ನೇ ಶತಮಾನದ ವಚನಕಾರರು, ಹಾಗೂ ಸಾಮಾಜಿಕಕ್ರಾಂತಿಕಾರರಲ್ಲಿ ಒಬ್ಬರು.ಇವರು ಬಸವಣ್ಣನವರ ಬಲಗೈ ಬಂಟರು.ಹಾಗೂ ಅನುಭವ ಮಂಟದಲ್ಲಿ ಬಸವಣ್ಣನವರ ಆಪ್ತ ಕಾರ್ಯದರ್ಶಿಗಳಾಗಿದ್ದರು.ಬಸವಣ್ಣನವರ ಸಹಾಯಕರಾಗಿ ಬದುಕಿದ ಎಕೈಕ ವ್ಯಕ್ತಿ ಎಂದರೆ ಅದು ಅಡಪದ ಅಪ್ಪಣ್ಣನವರು.

12 ನೇ ಶತಮಾನದ ಜನರು ಅಡಪ ಎಂದರೆ ಅವರನ್ನ ಬೇರೆ ದೃಷ್ಟಿಕೋನದಿಂದ ನೋಡುತ್ತಿದ್ದರು.ಆದರೆ ಬಸವಣ್ಣನವರು ಬಂದ ಶರಣರಿಗೆ ಅಪ್ಪಣ್ಣನನ್ನು ಮಾತನಾಡಿಸಿಕೋಂಡು ನಂತರ ನನ್ನ ಬಳಿ ಬನ್ನಿ ಎಂದು ಹೇಳುತ್ತಿದ್ದರು ಎಂದರು.

ಕ ಾ ಂ ು ್ ು ಕ ್ ್ರ ವ ್ ು ದ ್ ಲ್ಲಿ ಉಚ್ಚನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ಹೆಚ್.ಬಿಲ್ಲಪ್ಪ,ಮತ್ತೋಡು ಹೋಬಳಿ ಘಟಕದ ಅಧ್ಯಕ್ಷ ರಮೇಶ್, ಕಾರ್ಯದರ್ಶಿ ಚಿಕ್ಕಮುದ್ದು, ಮಾಜಿ ಕಾರ್ಯದರ್ಶಿ ನಾಗತಿಹಳ್ಳಿಮಂಜುನಾಥ್, ಡಿ.ಟಿ.ಚಂದ್ರಶೇಖರ್, ನಾಗರಾಜಪ್ಪ, ಕವಿಯತ್ರಿ ಕುಮಾರಿ ನಳಿನಾ, ನಿವೃತ್ತ ಶಿಕ್ಷಕ ತಿಮ್ಮಣ್ಣ, ನಿವೃತ್ತ ಉಪನ್ಯಾಸಕ ಸುಮತಿಕುಮಾರ್, ಶಿಕ್ಷಕಿ ಶ್ರೀಮತಿ ಶಭೀನಾ ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T